ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ
ರಾಯಚೂರಿನಿಂದ ರಾಜ್ಯದವರೆಗೆ
ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issue : 176 | ದಿನಾಂಕ : 26-04-2026 Date : 26-04-2026 | ರವಿವಾರ Sunday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಶಿರಪುರು ಮಾದರಿ ಚೆಕ್ ಡ್ಯಾಂಗಳ ನಿರ್ಮಾಣ ಗುಣಮಟ್ಟ ಖಾತ್ರಿಯಿಲ್ಲದೇ ಅಂತರ್ಜಲ ಹೆಚ್ಚಳದ ಸವಾಲು..!

### ಸಣ್ಣ ನೀರಾವರಿ ಇಲಾಖೆಯಡಿ ಕಾಮಗಾರಿಗಳ ಗುಣಮಟ್ಟ ಸಮಸ್ಯೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಏ.25-** ಜಿಲ್ಲೆಯೂ ಸೇರಿದಂತೆರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕುಸಿತಗೊಂಡಿರುವ ಅಂತರ್ಜಲ ಹೆಚ್ಚಳಕ್ಕೆ ಮಹಾರಾಷ್ಟ್ರದ ಶಿರಪುರ ಮಾದರಿ ಸರಣಿ ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡುವ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆ ಕೈಗೆತ್ತಿಕೊಂಡಿದ್ದು 21 ಕೋಟಿ ರೂ ವ್ಯಯ ಮಾಡಿದೆ. ಆದರೆ ನಿರೀಕ್ಷಿತ ಫಲಿತಾಂಶ ದೊರಕದೇ ಹೋಗಿದೆ.

ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡುವಲ್ಲಿನ ಅನುಭವದ ಕೊರತೆ, ಗುಣಮಟ್ಟ ನಿರ್ವಹಣೆ ಸಮಸ್ಯೆಯಿಂದಾಗಿ ಮಾದರಿಯಲ್ಲಿ ನಿರ್ಮಾಣವಾಗಬೇಕಿದ್ದ ಚೆಕ್ ಡ್ಯಾಂಗಳ ಕಾಮಗಾರಿಗಳ ಗುಣಮಟ್ಟದ ಕುರಿತಂತೆ ಅನೇಕ ಆಕ್ಷೇಪಣೆಗಳು



ವ್ಯಕ್ತವಾಗಲು ಕಾರಣವಾಗಿದೆ.

ಕಲ್ಯಾಣ ಕರ್ನಾಟಕ ಜಿಲ್ಲೆಗಳು ಬಿಸಿಲಿನ ಪ್ರಖರತೆ ಹೆಚ್ಚಳವಾಗಿದ್ದು ಅಂತರ್ಜಲ ಮಟ್ಟ ಕುಸಿತ ಹಾದಿಯಲ್ಲಿ ಮುಂದುವರೆದಿದೆ. ಅಂತರ್ಜಲ ಮಟ್ಟ ಹೆಚ್ಚಿಸಲೆಂದೇ 182 ಕೋಟಿ ವೆಚ್ಚದಲ್ಲಿ ಶಿರಪುರು ಮಾದರಿ ಸರಣಿ ಚೆಕ್ ಡ್ಯಾಂ ನಿರ್ಮಾಣ ಯೋಜನೆಯನ್ನು ರೂಪಿಸಲಾಗಿತ್ತಿದ್ದರೂ ಚೆಕ್ ಡ್ಯಾಂಗಳ ನಿರ್ಮಾಣ ಸಮರ್ಪಕವಾಗಿ ನಿರ್ವಹಿಸದೇ ಅನುದಾನ ಸದ್ಬಳಕೆ ಅನುಮಾನಗಳು ಹುಟ್ಟಲು ಕಾರಣವಾಗಿವೆ.

ಅಟಲ ಭೂ ಜಲ ಯೋಜನೆಯಡಿಯೂಚೆಕ್ ಡ್ಯಾಂಗಳನ್ನು ನಿರ್ಮಿಸಲಾಗುತ್ತಿದೆ. ಚೆಕ್ ಡ್ಯಾಂಗಳ ನಿರ್ಮಾಣದಿಂದ ಅಂತರ್ಜಲ ಹೆಚ್ಚಳವಾಗಿ ➘4

## ಬಿಜೆಪಿ ಸೇರಿದ 7 ಬಂಡಾಯ ಸಂಸದರನ್ನು ಅನರ್ಹಗೊಳಿಸುವಂತೆ ಉಪರಾಷ್ಟ್ರಪತಿಗೆ ಎಪಿಪಿ ಪತ್ರ: ಸಂಜಯ್ ಸಿಂಗ್

**ನವದೆಹಲಿ,ಏ.25-**ಏಳು ರಾಜ್ಯಸಭಾ ಸಂಸದರು ಪಕ್ಷವನ್ನು ತೊರೆದು ಭಾರತೀಯ ಜನತಾ ಪಕ್ಷ ಸೇರುವ ನಿರ್ಧಾರವನ್ನು ಆಮ್ ಆದ್ಮಿ ಪಕ್ಷ ಸಂವಿಧಾನಬಾಹಿರ ಎಂದು ಕರೆದಿದ್ದು ಅವರ ಸದಸ್ಯತ್ವವನ್ನು ರದ್ದುಗೊಳಿಸುವಂತೆ ಒತ್ತಾಯಿಸಿದೆ. ಈ ಸಂಸದರನ್ನು ಮೇಲ್ಮನೆಯಿಂದ ಅನರ್ಹಗೊಳಿಸುವಂತೆ ಕೋರಿ ಪಕ್ಷವು ರಾಜ್ಯಸಭಾ ಅಧ್ಯಕ್ಷರಿಗೆ ಪತ್ರ ಬರೆಯಲಿದೆ ಎಂದು ಎಎಪಿ ನಾಯಕ ಸಂಜಯ್ ಸಿಂಗ್ ಹೇಳಿದ್ದಾರೆ.

ರಾಜ್ಯಸಭಾ ಮತ್ತು ಲೋಕಸಭೆಯಲ್ಲಿ ಯಾವುದೇ ರೀತಿಯ ಬಂಡಾಯ ಅಥವಾ ಬಣಕ್ಕೆ ಮೂರನೇ ಎರಡರಷ್ಟು ಬಹುಮತವಿದ್ದರೂ ಸಹ, ಯಾವುದೇ ಕಾನೂನು ಮಾನ್ಯತೆ ಇಲ್ಲ ಎಂದು ಪಕ್ಷಾಂತರ ವಿರೋಧಿ ಕಾನೂನು ಸ್ಪಷ್ಟವಾಗಿ ಹೇಳುತ್ತದೆ ಎಂದು ➘4

## ಜೀವಾವಧಿ ಶಿಕ್ಷೆಗೆ ತಡೆ ಕೋರಿ ವಿನಯ್ ಕುಲಕರ್ಣಿ ಹೈಕೋರ್ಟ್ ಗೆ ಮೇಲ್ಮನವಿ

**ಬೆಂಗಳೂರು,ಏ.25-**ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ವಿನಯ್ ಕುಲಕರ್ಣಿ ತಮಗೆ ವಿಧಿಸಿರುವ ಶಿಕ್ಷೆಗೆ ತಡೆ ಕೋರಿ ಹೈಕೋರ್ಟ್‌ಗೆ ಮೇಲ್ಮನವಿಯನ್ನ ಸಲ್ಲಿಸಿದ್ದಾರೆ. ಜನಪ್ರತಿನಿಧಿಗಳ ಕೋರ್ಟ್ ವಿಧಿಸಿದ್ದ ಜೀವಾವಧಿ ಶಿಕ್ಷೆ ಹಾಗೂ ಸಕ್ಷಮ ನ್ಯಾಯಾಲಯ ನೀಡಿದ್ದ ಕನ್ವಿಕ್ಷನ್ ಆದೇಶವನ್ನ ಪ್ರಶ್ನಿಸಿ, ಶಿಕ್ಷೆಗೆ ತಡೆಯಾಜ್ಞೆ ಮತ್ತು ಜಾಮೀನು ನೀಡುವಂತೆ ಅವರು ಹೈಕೋರ್ಟ್ ಗೆ ಇಂದು ಮನವಿ ಮಾಡಿದ್ದಾರೆ.

ಜೀವಾವಧಿ ಶಿಕ್ಷೆ ಆದೇಶವನ್ನು ರದ್ದುಪಡಿಸುವಂತೆ ತಮ್ಮ ಅರ್ಜಿಯಲ್ಲಿ ವಿನಯ್ ಕುಲಕರ್ಣಿ ಕೋರಿದ್ದಾರೆ. ತಮಗೆ ಶಿಕ್ಷೆ ವಿಧಿಸಿರುವುದರಿಂದ ಶಾಸಕ ಸ್ಥಾನ ಕಳೆದುಕೊಳ್ಳುವ ಸಾಧ್ಯತೆಗಳಿರುವ ಕಾರಣ, ಶಿಕ್ಷೆಗೆ ತಕ್ಷಣ ತಡೆಯಾಜ್ಞೆ ನೀಡುವಂತೆ ಕೋರಿದ್ದಾರೆ. ➘4


## ವಲ್ಲಭ ಭಾಯಿ ಪಟೇಲ್ ವೃತ್ತದಲ್ಲಿ ಹೊತ್ತಿ ಉರಿದ ಟಿಸಿ ವಿದ್ಯುತ್ ಸಂಪರ್ಕವಿಲ್ಲದೇ ಪರದಾಡಿದ ಜನತೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ನಗರದ ಸರ್ದಾರ ವಲ್ಲಭಾಯಿ ಪಟೇಲ್ ವೃತ್ತದಲ್ಲಿರುವ ಟಿಸಿಯಲ್ಲಿ ಏಕಾಏಕಿ ಬೆಂಕಿ ಹತ್ತಿಕೊಂಡು ಆತಂಕ ಸೃಷ್ಟಿಯಾದ ಘಟನೆ ಶುಕ್ರವಾರ ರಾತ್ರಿ ನಡೆದಿದೆ. ಟಿಸಿಯಲ್ಲಿದ್ದ ಆಯಿಲ್ ಸೋರಿಕೆಯಾಗಿ ಬೆಂಕಿ ಹತ್ತಿಕೊಂಡಿದ್ದರಿಂದ ಟಿಸಿ ಸ್ಫೋಟಗೊಳ್ಳುವ ಭೀತಿ ಆವರಿಸಿತ್ತು.

ಆಯಿಲ್ ನಿರಂತರವಾಗಿ ಹೊರಬರುತ್ತಿರುವದರಿಂದ ಬೆಂಕಿ ನಂದಿಸಲು ಸಾರ್ವಜನಿಕರು ಹಿಂದೇಟು ಹಾಕುವಂತಾಯಿತು.

ವಾಹನ ಸಂಚಾರ ಸ್ಥಗಿತಗೊಳ್ಳುವಂತಾಯಿತು. ಜೆಸ್ಕಾಂ ಟಿಸಿ ವಿದ್ಯುತ್ ➘4



## ವಾಸವಿ ಜಯಂತಿ ಅಂಗವಾಗಿ ಹಾಕಲಾದ ಫ್ಲೆಕ್ಸ್ ತೆರವುಗೊಳಿಸಿದ ಪಾಲಿಕೆ ಸಿಬ್ಬಂದಿಗಳ ಕ್ರಮವಿರೋಧಿಸಿ ಧೀಡಿರ್ ರಸ್ತೆ ತಡೆ-ಕ್ರಮಕ್ಕೆ ಒತ್ತಾಯ





■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ಶ್ರೀವಾಸವಿ ಜಯಂತಿ ಅಂಗವಾಗಿ ಶ್ರೀ ನಗರೇಶ್ವರ ದೇವಸ್ಥಾನದ ಒಳ ಗಡೆ ಹಾಕಲಾಗಿರುವ ಫ್ಲೆಕ್ಸ್ ಬ್ಯಾನರ್‌ಗಳನ್ನು ಮಹಾನಗರಪಾಲಿಕೆ ಸಿಬ್ಬಂದಿಗಳು ಏಕಾಏಕಿ ತೆರವುಗೊಳಿಸಿರುವದನ್ನು ವಿರೋಧಿಸಿ ಆರ್ಯವೈಶ್ಯ ಸಮಾಜ ಧೀಡಿರ್ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಆರ್ಯವೈಶ್ಯ ಸಮಾಜ ಹಾಗೂ ಶ್ರೀನಗರೇಶ್ವರ ದೇವಸ್ಥಾನ ಸಮಿತಿಯಿಂದ ಶ್ರೀವಾಸವಿಜಯಂತಿ ಆಚರಣೆ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಶ್ರೀವಾಸವಿಮಾತೆಗೆ ವಿಶೇಷ ಪೂಜೆ, ಅಲಂಕಾರ ಕಾರ್ಯಕ್ರಮಗಳು ನಡೆದಿದ್ದವು. ಪಾಲಿಕೆ ಸಿಬ್ಬಂದಿ ಅದೇನೋ ಆಯಿತೋ ಗೊತ್ತಿಲ್ಲ ಏಕಾಏಕಿ ದೇವಸ್ಥಾನ ಒಳಗಡೆ ಹಾಕಿರುವ ಫ್ಲೆಕ್ಸ್‌ಗಳನ್ನು ತೆರವುಗೊಳಿಸಿರುವದನ್ನು ಖಂಡಿಸಿ ಸಮಾಜದ ➘4

## ಚಿಕ್ಕಮಗಳೂರಲ್ಲಿ ವರುಣನ ಆರ್ಭಟ: ಬಿರುಗಾಳಿ, ಆಲಿಕಲ್ಲು ಸಹಿತ ಮಳೆ, ನದಿಯಲ್ಲಿ ಮುಳುಗಿ ವೃದ್ಧೆ ಸಾವು

**ಚಿಕ್ಕಮಗಳೂರು,ಏ.25-**ಕಳಸ ಮತ್ತು ಮೂಡಿಗೆರೆ ತಾಲೂಕಿನ ಹಲವೆಡೆ ಶುಕ್ರವಾರ ಬಿರುಗಾಳಿ ಸಹಿತ ಆಲಿಕಲ್ಲು ಮಳೆ ಸುರಿದಿದೆ. ಕುದುರೆಮುಖ ರಸ್ತೆಯಲ್ಲಿ ಮಳೆಯಿಂದ ಮರವೊಂದು ರಸ್ತೆಗೆ ಉರುಳಿಬಿದ್ದ ಪರಿಣಾಮ ಕೆಲಕಾಲ ಸಂಚಾರ ಸ್ಥಗಿತಗೊಂಡಿತ್ತು.

ಚಿಕ್ಕಮಗಳೂರು, ವಸ್ತಾರೆ, ಕೂದುವಳ್ಳಿ, ಆಲ್ದೂರು, ಮೂಡಿಗೆರೆ, ಕುದುರೆಮುಖ, ಕೊಟ್ಟಿಗೆಹಾರ, ಬಾಳೂರು, ಕೂವೆ, ಗೋಣಿಬೀಡು, ಕಳಸ, ಬಾಳೆಹೊನ್ನೂರು, ಎನ್ ಆರ್ ಪುರ ತಾಲೂಕು ಹಾಗೂ ಕೊಪ್ಪ ಭಾಗದಲ್ಲಿ ಮಳೆ ಸುರಿಯಾಗಿದ್ದು, ಜನ ಜೀವನ ಅಸ್ತವ್ಯಸ್ತಗೊಂಡಿತ್ತು.

ಕಳಸ ತಾಲೂಕಿನ ಅನೇಕ ಭಾಗಗಳಲ್ಲಿ ಬಿರುಗಾಳಿ ಸಹಿತ ಸುರಿದ ಮಳೆಗೆ ವಿದ್ಯುತ್ ಕಂಬಗಳು ಧರೆಗುರುಳಿದ ಪರಿಣಾಮ ಹಲವು ಗ್ರಾಮಗಳು ಕತ್ತಲಲ್ಲಿ ಕಾಲ ಕಳೆಯುವಂತಾಯಿತು. ಕೆಲವೆಡೆ ಬಿರುಗಾಳಿ ತೀವ್ರತೆಗೆ ಮನೆಯ ಮೇಲ್ಛಾವಣಿ, ಸೀಟ್‌ಗಳು ಹಾರಿ ➘4

## ಶ್ರೀ ಅಭಯಾಂಜನೇಯ ದೇವಸ್ಥಾನ ಸಮಿತಿಯಿಂದ ಗ್ರಂಥ ಲೋಕಾರ್ಪಣೆ ಸಮಾಜಮುಖಿ ಕಾರ್ಯ ಮಾದರಿ-ಭೋಸರಾಜ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ಅನ್ನದಾಸೋಹ, ಜ್ಞಾನ ದಾಸೋಹ, ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುವ ಗಿರಿ ಅಭಯ ಆಂಜನೇಯಸ್ವಾಮಿ ಸೇವಾ ಸಮಿತಿಯ ಕಾರ್ಯ ಪ್ರತಿಯೊಬ್ಬರಿಗೂ ಮಾದರಿಯಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಹೇಳಿದರು.

ಅವರಿಂದು ನಗರದ ರಂಗಮಂದಿರದಲ್ಲಿ ಗಿರಿ ಅಭಯ ಆಂಜನೇಯ್ಯ ಸ್ವಾಮಿ ಸೇವಾ ಸಮಿತಿಯಿಂದ ಹಮ್ಮಿಕೊಂಡಿದ್ದ ಅಭಯಾಂತರಂಗ ಗ್ರಂಥ ಲೋಕಾರ್ಪಣೆ ಹಾಗೂ ಅಭಿನಂದನಾ ಸಮಾರಂಭ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ನಾಟಕ ಪ್ರದರ್ಶನವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪ್ರತಿ ತಿಂಗಳು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಸಾಹಿತ್ಯ, ಸಂಸ್ಕೃತಿ, ನಾಡು, ನುಡಿ, ➘4



## ಬಸ್‌ನಲ್ಲಿ ಕಳೆದುಕೊಂಡ ಚಿನ್ನದ ಸರ ಪ್ರಾಮಾಣಿಕವಾಗಿ ಮರಳಿಸಿದ ಸಾರಿಗೆ ಸಿಬ್ಬಂದಿ: ಮೆಚ್ಚುಗೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ಬಸ್‌ನಲ್ಲಿ ಪ್ರಯಾಣಿಸುತ್ತಿದ್ದಾಗ ಬಂಗಾರ ಆಭರಣ ಕಳೆದುಕೊಂಡಿದ್ದ ಮಸ್ಕಿ ಮೂಲದ ಮಹಿಳೆಗೆ ನಗರ ಸಾರಿಗೆ ಚಾಲಕ ಮತ್ತು ನಿರ್ವಾಹಕ ಆಭರಣ ಮರಳಿ ನೀಡಿ ಪ್ರಾಮಾಣಿಕತೆ ಮೆರೆದ ಘಟನೆಜರುಗಿದೆ.

ಮಸ್ಕಿಯ ಗಾಂಧಿ ನಗರದ ನಿವಾಸಿ ಅಸೀನ್ ಬಾನು ಎಂಬುವವರೂ ರೈಲ್ವೆಸ್ಟೇಷನ್‌ನಿಂದ ಬೋಳಮಾನದೊಡ್ಡಿ ಸಂಚರಿಸುವ ನಗರ ಸಂಚಾರ ➘4



## ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧ ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ ಪ್ರತಿಭಟನೆ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ಮಹಿಳಾ ಮೀಸಲಾತಿ ಮಸೂ ದೆಗೆ ಕಾಂಗ್ರೆಸ್ ಹಾಗೂ ಮಿತ್ರ ಪಕ್ಷಗಳು ವಿರೋಧ ವ್ಯಕ್ತಪಡಿಸಿರುವುದನ್ನು ಖಂಡಿಸಿ ಜಿಲ್ಲಾ ಬಿಜೆಪಿ ಮಹಿಳಾ ಘಟಕದಿಂದ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿದ ಕಾಂಗ್ರೆಸ್ ಹಾಗೂ ಮಿತ್ರ ಪಕ್ಷಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಹಿಳಾ ಮೋರ್ಚಾ ಮುಖಂಡರಾದ ಶರಣಮ್ಮ ಕಾಮರೆಡ್ಡಿ ಮಾತ ನಾಡಿ,

ಈ ಹಿಂದೆ ಮಹಿಳೆಯರಿಗೆ ಶೇ.33 ಮೀಸಲಾತಿ ನೀಡಲು ಮಸೂದೆ ಮಂಡಿಸಿತ್ತು. ಆದರೆ, ಅಂದು ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ವಿರೋಧಿಸಿದ್ದವು,

ಇದೀಗ ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಮೀಸಲಾತಿ ಕಲ್ಪಿಸುವ

ಉದ್ದೇಶದೊಂದಿಗೆ ಕೇಂದ್ರ ಸರ್ಕಾರ ಮಂಡಿಸಿದ ಮಹಿಳಾ ಮೀಸಲಾತಿ ಮಸೂದೆಗೆ ವಿರೋಧ ವ್ಯಕ್ತಪಡಿಸಿದ ಕಾಂಗ್ರೆಸ್ ನಡೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷ ಮಹಿಳಾ ವಿರೋಧಿಯಾಗಿದೆ. ಕಾಂಗ್ರೆಸ್ ಪಕ್ಷದ ನಿಲುವನ್ನು ಖಂಡಿಸುತ್ತೇವೆ ಎಂದರು. ➘4

## ವಂದಲಿ ಶ್ರೀ ಮಾರುತೇಶ್ವರ ಚಲನಚಿತ್ರ ಬಿಡುಗಡೆ 26ರಂದು ರಂಗಮಂದಿರದಲ್ಲಿ ಉಚಿತ ಪ್ರದರ್ಶನ-ಶ್ರೀ ಭೀಮ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.25-**ವಂದಲಿ ಶ್ರೀ ಮಾರುತೇಶ್ವರ ಮಹಿಮೆ ಒಂದು ಪೌರಾಣಿಕ ಚಿತ್ರವಾಗಿದ್ದು, 100 ವರ್ಷಗಳ ಹಿಂದೆ ನಡೆದ ನೈಜ ಘಟನೆಯನ್ನು ಆಧರಿಸಿ ನಿರ್ಮಾಣ ಮಾಡಿದ ಚಿತ್ರವಾಗಿದ್ದು, ಈ ಚಿತ್ರವನ್ನು ಏ.26ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಸಾರ್ವಜನಿಕರಿಗಾಗಿ ಉಚಿತವಾಗಿ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಚಿತ್ರದ ನಿರ್ದೇಶಕ ಶ್ರೀಭೀಮ್ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಜಿಲ್ಲೆಯ ಹಟ್ಟಿಯ ವಂದಲಿ ಆಂಜನೇಯ್ಯ ಸ್ವಾಮಿ ಪವಾಡವನ್ನು ತಿಳಿಸುವ ಚಿತ್ರವನ್ನು ಈಗಿನ ವಾಸ್ತವ ಸ್ಥಿಗೆ ಆಧುನಿಕ ಯಂತ್ರೋಪಕರಣಗಳನ್ನು ಬಳಸಿಕೊಂಡು, ತಂತ್ರಜ್ಞಾನವನ್ನು ಬಳಸಿಕೊಂಡು ನಿರ್ಮಾಣ ಮಾಡಲಾಗಿದ್ದು,

ವಂದಲಿ ಗ್ರಾಮದ ಹಿರಿಯರು ಮತ್ತು ಅಲ್ಲಿನ ಪುಸ್ತಕವೊಂದರಲ್ಲಿ ಉಲ್ಲೇಖವಾದ ನೈಜ ಘಟನೆಯೊಂದನ್ನು ಆಧರಿಸಿ ಈ ಚಿತ್ರವನ್ನು ನಿರ್ಮಾಣ ಮಾಡಲಾಗಿದೆ ಎಂದರು.




ಚಲನ ಚಿತ್ರವು ಒಂದು ಗಂಟೆಗಳ ಅವಧಿಯನ್ನು ಹೊಂದಿದ್ದು, ರಂಗಮಂದಿರದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಚಿತ್ರವನ್ನು ವೀಕ್ಷಿಸಬಹುದಾಗಿದೆ. ಚಿತ್ರದಲ್ಲಿ ನಾಲ್ಕು ಹಾಡುಗಳಿದ್ದು, ಒಟ್ಟು 2.90 ಲಕ್ಷ ರೂ. ➘4

# ಪ್ರಧಾನಿ ಮೋದಿಯಿಂದ ವಿಶಿಷ್ಟ ರೀತಿಯಲ್ಲಿ ಆರ್‌ಎಸ್‌ಎಸ್ ಮೌಲ್ಯಗಳ ಪ್ರಚಾರ-ದತ್ತಾತ್ರೇಯ ಹೊಸಬಾಳೆ

**ವಾಷಿಂಗ್ಟನ್,ಏ.25**–ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಆರ್‌ಎಸ್‌ಎಸ್‌ನ ಮೌಲ್ಯಗಳನ್ನು ತಮ್ಮದೇ ಆದ ವಿಶಿಷ್ಟ ರೀತಿಯಲ್ಲಿ ಪ್ರಚಾರ ಮಾಡುತ್ತಿದ್ದಾರೆ. ಅವರು ಸಂಘಟನೆಯ ಅತ್ಯುತ್ತಮ ಪ್ರತಿನಿಧಿ ಎಂದು ಆರ್‌ಎಸ್‌ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ತಿಳಿಸಿದ್ದಾರೆ.

ಪಿಟಿಐಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅವರು, ಮುಂದಿನ 25 ವರ್ಷಗಳ ಕಾಲ ಆರ್‌ಎಸ್‌ಎಸ್ ಐದು ಪ್ರಮುಖ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಗುರಿ ಹೊಂದಿದೆ. ಅದು ಸಾಮಾಜಿಕ ಸಾಮರಸ್ಯ ಮತ್ತು ಒಗ್ಗಟ್ಟಿಗಾಗಿ ಕೆಲಸ ಮಾಡುವುದು. ಸ್ವಯಂ ಅರಿವು ಮೂಡಿಸುವುದು, ವಸಾಹತುಶಾಹಿ ಮನಸ್ಥಿತಿಯನ್ನು ತೊಡೆದುಹಾಕುವುದು, ನಾಗರಿಕ ಪ್ರಜ್ಞೆಯನ್ನು ಹುಟ್ಟುಹಾಕುವುದು, ಕುಟುಂಬ ಮೌಲ್ಯಗಳನ್ನು ಬಲಪಡಿಸುವುದು ಮತ್ತು ಸುಸ್ಥಿರ ಅಭಿವೃದ್ಧಿ ಮಾದರಿಗಳನ್ನು ಅನುಸರಿಸುವುದಾಗಿದೆ. ಪ್ರಧಾನಿ ಮೋದಿ ಈ ಕೆಲಸಗಳನ್ನು ತಮ್ಮದೇ ಆದ ವಿಶಿಷ್ಟ ರೀತಿಯಲ್ಲಿ ಮಾಡುತ್ತಿದ್ದಾರೆ. ನಾವು ಮರ ನೆಡಿ ಎಂದೆವು. ಅವರು ತಾಯಿಯ ಹೆಸರಲ್ಲಿ ಒಂದು ಮರ



ನೆಡಿ ಎಂದು ಹೇಳಿದರು.

ಸರ್ಕಾರಿ ಕಾರ್ಯಕ್ರಮಗಳಲ್ಲಿ ಸಂಘದ ಪ್ರತಿಬಿಂಬ: ಹಲವು ಸರ್ಕಾರಿ ಕಾರ್ಯಕ್ರಮಗಳು ಆರ್‌ಎಸ್‌ಎಸ್‌ನ ಅಭಿಪ್ರಾಯವನ್ನು ಪ್ರತಿಬಿಂಬಿಸುತ್ತದೆ. 2022ರ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಧಾನಿ ಹೇಳಿದ ಆತ್ಮನಿರ್ಭರ ಭಾರತ್ ಉಪಕ್ರಮ ಒಂದು ನಿದರ್ಶನ. ಅವರು, ಸಂಘಟನೆಯ ಸ್ವಯಂಸೇವಕನಾಗಿರುವುದರಿಂದ, ಇವು ಅವರಿಗೆ ಸ್ವಾಭಾವಿಕವಾಗಿಯೇ ಇರುತ್ತವೆ ಎಂದರು.

ಆರ್‌ಎಸ್‌ಎಸ್‌ನ ಶತಮಾನೋತ್ಸವದ ಸಂದರ್ಭದಲ್ಲಿ ಅಂಚೆ ಚೀಟಿ ಮತ್ತು ಸ್ಮರಣಾರ್ಥ ನಾಣ್ಯವನ್ನು ಬಿಡುಗಡೆ ಮಾಡುವಾಗ, ಸಂಘವು ರೂಪಿಸಿರುವ ಭವಿಷ್ಯದ ಹಾದಿಯ ಮಹತ್ವವನ್ನು ಪ್ರಧಾನಿ ಒತ್ತಿ ಹೇಳಿದರು ಎಂದು ಕೂಡ ತಿಳಿಸಿದರು.

ಸಂಘದ ಅತ್ಯುತ್ತಮ ಪ್ರತಿನಿಧಿ: ಮೋದಿ ಅವರು ಪ್ರಜಾಪ್ರಭುತ್ವದಲ್ಲಿ ಚುನಾಯಿತ ಪ್ರಧಾನಿ, ಆದರೆ ಅವರ ಸಾಂಸ್ಕೃತಿಕ ಬೇರುಗಳು ಯಾವುವು ಮತ್ತು ಈ ಸಂಘಟನೆ ಏನನ್ನು ಪ್ರತಿನಿಧಿಸುತ್ತದೆ ಎಂಬುದು ಅವರಿಗೆ ಚೆನ್ನಾಗಿ ಗೊತ್ತಿದೆ. ಅವರು ಸಂಘದ ಅತ್ಯುತ್ತಮ ಪ್ರತಿನಿಧಿ ಎಂದು ಹೊಸಬಾಳೆ ಅಭಿಪ್ರಾಯಪಟ್ಟರು.

1980 ರಲ್ಲಿ ಬಿಜೆಪಿ ರಚನೆಯಾದಾಗ ಅದರ ಸಂಸ್ಥಾಪಕರು ಆರ್‌ಎಸ್‌ಎಸ್‌ನೊಂದಿಗೆ ಹೊಕ್ಕುಳಬಳ್ಳಿಯನ್ನು ಉಳಿಸಿಕೊಳ್ಳಲು ಬಯಸಿದ್ದರು. ಅವರು ಆರ್‌ಎಸ್‌ಎಸ್‌ನ ಸಂಬಂಧಗಳನ್ನು ಉಳಿಸಿಕೊಳ್ಳಲು ಬಯಸಿದ್ದರು. ಜನತಾ ಪಕ್ಷದಿಂದ ದೂರ ಸರಿದು ರಾಜಕೀಯ ಪಕ್ಷದ ರಚನೆಗೆ ಅದೇ ಪ್ರಮುಖ ಕಾರಣವಾಗಿತ್ತು. ಆ ರೀತಿಯಲ್ಲಿ, ಆ ಹೊಕ್ಕುಳಬಳ್ಳಿಯ ಸಂಬಂಧಕ್ಕೆ ಯಾವುದೇ ಅಡೆತಡೆ ಸಾಧ್ಯವಿಲ್ಲ ಎಂದು ತಿಳಿಸಿದರು.

# ಸುಧಾಕರ್ ಗಂಭೀರ: ಪ್ರಜ್ಞೆ ಇಲ್ಲ ಅಂದ್ರೆ ಕಸಿ ಮಾಡಲ್ಲ ಆಸ್ಪತ್ರೆಗೆ ಸಿಎಂ ಸಿದ್ದರಾಮಯ್ಯ ಭೇಟಿ

**ಬೆಂಗಳೂರು,ಏ.25**–ಆಸ್ಪತ್ರೆಗೆ ದಾಖಲಾಗಿರುವ ಸಚಿವ ಡಿ ಸುಧಾಕರ್ ಅವರ ಆರೋಗ್ಯ ವಿಚಾರಿಸಲು ಸಿಎಂ ಸಿದ್ದರಾಮಯ್ಯ ಆಸ್ಪತ್ರೆಗೆ ತೆರಳಿ ವೈದ್ಯಾಧಿಕಾರಿಗಳಿಂದ ಶನಿವಾರ ಮಾಹಿತಿ ಪಡೆದರು.

ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಸಚಿವ ಡಿ. ಸುಧಾಕರ್ ಅವರನ್ನು ಭೇಟಿ ಮಾಡಿ, ಅವರಿಗೆ ಪ್ರಜ್ಞೆ ಬಂದ ನಂತರ ವೈದ್ಯರು ಹೆಚ್ಚಿನ ಚಿಕಿತ್ಸೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

ಶ್ವಾಸಕೋಶದ ಸೋಂಕಿನಿಂದಾಗಿ ಯೋಜನೆ ಮತ್ತು ಸಾಂಖ್ಯಿಕ ಸಚಿವ ಸುಧಾಕರ್ ಅನಾರೋಗ್ಯಕ್ಕೆ ಒಳಗಾಗಿದ್ದು, ಖಾಸಗಿ ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಕೃಷ್ಣ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್ (ಕಿಮ್ಸ್) ಗೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಸುಧಾಕರ್ ಇನ್ನೂ ಪ್ರಜ್ಞೆ ಮರಳಿಲ್ಲ. ಅವರು ಇನ್ನೂ ತೀವ್ರ ನಿಗಾ ಘಟಕದಲ್ಲಿದ್ದಾರೆ. ವೈದ್ಯರು ನಾಳೆ ನಿರ್ಧಾರ



ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

ಶ್ವಾಸಕೋಶ ಕಸಿ ಮಾಡಿಸಿಕೊಳ್ಳಬೇಕೇ ಎಂಬ ಪ್ರಶ್ನೆಗೆ ಉತ್ತರಿಸಿದ ಸಿಎಂ, ಈಗ ಕಸಿ ಮಾಡಿಸಿಕೊಳ್ಳಬೇಕಾದರೆ, ಅವರು ಪ್ರಜ್ಞೆ ಮರಳಿ ಪಡೆಯಬೇಕು. ಅವರಿಗೆ ಈಗ ಪ್ರಜ್ಞೆ ಇಲ್ಲ. ವೈದ್ಯರು ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

ಸಚಿವರ ಸ್ಥಿತಿಯ ಬಗ್ಗೆ ಕೇಳಿದಾಗ, ಅವರು ಈಗ ಸ್ಥಿರವಾಗಿದ್ದಾರೆ, ಆದರೆ

# ಬಿಸಿಲಿನ ಬೇಗೆಗೆ ಬೆಂದ ವಿಜಯನಗರ: ಹೀಟ್ ಸ್ಟ್ರೋಕ್ ತಡೆಗೆ ಜಿಲ್ಲೆಯಾದ್ಯಂತ 81 ವಿಶೇಷ ಬೆಡ್‌ಗಳ ತಾಪಾಘಾತ ಕೇಂದ್ರ ಸ್ಥಾಪನೆ






**ವಿಜಯನಗರ,ಏ.25**–ರಾಜ್ಯದಲ್ಲಿ ಸೂರ್ಯನ ಪ್ರಖರತೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಜಿಲ್ಲೆಯಲ್ಲೂ ಬಿಸಿಲಿನ ತಾಪಮಾನ ದಾಖಲೆ ಮಟ್ಟ ತಲುಪಿದೆ. ತಾಪಾಘಾತ ಹಾಗೂ ಬಿಸಿಲಿನಿಂದ ಉಂಟಾಗುವ ಅನಾರೋಗ್ಯ ತಡೆಗಟ್ಟಲು ಜಿಲ್ಲಾ ಆರೋಗ್ಯ ಇಲಾಖೆ ಸಮರೋಪಾದಿಯಲ್ಲಿ ಸಿದ್ಧತೆ ನಡೆಸಿದ್ದು, ಜಿಲ್ಲೆಯಾದ್ಯಂತ ವಿಶೇಷ ತಾಪಾಘಾತ ಚಿಕಿತ್ಸಾ ಕೇಂದ್ರ(ಟ)ಗಳನ್ನು ಆರಂಭಿಸಿದೆ.

ಜಿಲ್ಲೆಯಾದ್ಯಂತ 81 ವಿಶೇಷ ಬೆಡ್‌ಗಳ ವ್ಯವಸ್ಥೆ : ಬಿಸಿಲಿನ ಹೊಡೆತಕ್ಕೆ ಸಿಲುಕಿ ಅಸ್ವಸ್ಥರಾಗುವವರಿಗೆ ತುರ್ತು ಚಿಕಿತ್ಸೆ ನೀಡಲು ಜಿಲ್ಲಾ ಕೇಂದ್ರ ಹೊಸಪೇಟೆ ಸೇರಿದಂತೆ ಎಲ್ಲಾ ತಾಲೂಕು ಮತ್ತು ಹೋಬಳಿ ಮಟ್ಟದ ಆಸ್ಪತ್ರೆಗಳಲ್ಲಿ ವಿಶೇಷ ಕೊಠಡಿಗಳನ್ನು ಕಾಯ್ದಿರಿಸಲಾಗಿದೆ.

ಈ ಕುರಿತು ಮಾಹಿತಿ ನೀಡಿರುವ ವಿಜಯನಗರ ಜಿಲ್ಲಾ ಆರೋಗ್ಯಾಧಿಕಾರಿ ಡಾ. ವಿನಯ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 81 ವಿಶೇಷ ಬೆಡ್‌ಗಳನ್ನು ತಾಪಾಘಾತಕ್ಕೆ ಒಳಗಾದವರಿಗಾಗಿಯೇ ಮೀಸಲಿಡಲಾಗಿದೆ. ನಿರ್ಜಲೀಕರಣ, ವಾಂತಿ, ಬೇದಿ ಹಾಗೂ ತಲೆಸುತ್ತಿನಿಂದ ಬಳಲುವ ರೋಗಿಗಳಿಗೆ ಇಲ್ಲಿ ಪ್ರತ್ಯೇಕವಾಗಿ ಚಿಕಿತ್ಸೆ ನೀಡಲಾಗುವುದು ಎಂದು ತಿಳಿಸಿದರು.

ಮಧ್ಯಾಹ್ನ ಹೊರಬರಬೇಡಿ : ವಿಜಯನಗರ ಜಿಲ್ಲೆಯಲ್ಲಿ ಮಧ್ಯಾಹ್ನದ ವೇಳೆಗೆ ಉಷ್ಣಾಂಶ ತೀವ್ರವಾಗಿ ಏರುತ್ತಿರುವುದರಿಂದ ಜನರು ಮನೆಯಿಂದ ಹೊರಬರಲು ಹರಸಾಹಸ ಪಡುತ್ತಿದ್ದಾರೆ. ರಸ್ತೆಗಳು ಅಕ್ಷರಶಃ ಭಣಗುಡುತ್ತಿವೆ. ಬಿಸಿಲಿನ ತಾಪದಿಂದಾಗಿ ಸಾರ್ವಜನಿಕರಲ್ಲಿ ಆರೋಗ್ಯ ವ್ಯತ್ಯಯ ಉಂಟಾಗುವ ಸಾಧ್ಯತೆ ಹೆಚ್ಚಿರುವುದರಿಂದ, ಜಿಲ್ಲಾಸ್ಪತ್ರೆಯಲ್ಲಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರತಿಯೊಂದು ತಾಪಾಘಾತ ಕೊಠಡಿಯಲ್ಲೂ ಒಆರ್‌ಎಸ್ ದ್ರಾವಣ, ಅಗತ್ಯ ಐವಿ ಫ್ಲೂಯಿಡ್ಸ್ ಹಾಗೂ ತಂಪು ವ್ಯವಸ್ಥೆಯನ್ನು ಮಾಡಲಾಗಿದೆ. ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲೂ ಅಗತ್ಯ ಔಷಧಿಗಳ ದಾಸ್ತಾನು ಇರಿಸಲಾಗಿದೆ ಎಂದು ಡಿಹೆಚ್‌ಒ ಮಾಹಿತಿ ನೀಡಿದ್ದಾರೆ.

ಜಿಲ್ಲೆಯ ಜನತೆ ಬಿಸಿಲಿನ ಬಗ್ಗೆ ನಿರ್ಲಕ್ಷ್ಯ ವಹಿಸಬಾರದು. ತಾಪಾಘಾತಕ್ಕೆ ತುತ್ತಾದವರಿಗೆ ಚಿಕಿತ್ಸೆ ನೀಡಲು ನಮ್ಮ ವೈದ್ಯಕೀಯ ತಂಡ ಸನ್ನದ್ಧವಾಗಿದೆ. ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ಐಸೋಲೇಟೆಡ್ ಬೆಡ್‌ಗಳ ವ್ಯವಸ್ಥೆ ಮಾಡಲಾಗಿದ್ದು, ಸಾರ್ವಜನಿಕರು ಈ ಸೌಲಭ್ಯ ಬಳಸಿಕೊಳ್ಳಬಹುದು ಎಂದರು.

ಮುಂದಿನ ದಿನಗಳಲ್ಲಿ ಬಿಸಿಲಿನ ತೀವ್ರತೆ ಇನ್ನಷ್ಟು ಹೆಚ್ಚಾಗುವ ಮುನ್ಸೂಚನೆ ಇರುವುದರಿಂದ, ಸಾರ್ವಜನಿಕರು ಆರೋಗ್ಯ ಇಲಾಖೆಯ ಮಾರ್ಗಸೂಚಿಗಳನ್ನು ಪಾಲಿಸುವಂತೆ ಮನವಿ ಮಾಡಲಾಗಿದೆ.

# ರಾಮನಗರ: ಕಾವೇರಿ ನದಿಯಲ್ಲಿ ಆಟವಾಡುತ್ತಿದ್ದ ಪ್ರವಾಸಿಗರ ಮೇಲೆ ಕಾಡಾನೆ ದಾಳಿ, ಮಹಿಳೆಗೆ ಗಾಯ







**ರಾಮನಗರ,ಏ.25**–ಬೇಸಿಗೆ ರಜೆ ಹಿನ್ನೆಲೆಯಲ್ಲಿ ಕಾವೇರಿ ನದಿಯಲ್ಲಿ ಆಟವಾಡುತ್ತಿದ್ದ ಪ್ರವಾಸಿಗರ ಮೇಲೆ ಏಕಾಏಕಿ ಕಾಡಾನೆಯೊಂದು ದಾಳಿ ನಡೆಸಿದ ಘಟನೆ ಸಂಗಮ ಅರಣ್ಯ ಪ್ರದೇಶದ ಮೇಕೆದಾಟು ಬಳಿ ನಡೆದಿದೆ. ಕಾಡಿನಿಂದ ಬಂದ ಒಂಟಿ ಸಲಗ ಏಕಾಏಕಿ ದಾಳಿ ಮುಂದಾಗುತ್ತಿದ್ದಂತೆ ಪ್ರವಾಸಿಗರು ಸ್ಥಳದಿಂದ ಚೆಲ್ಲಾಪಿಲ್ಲಿಯಾಗಿ ಓಡಿದ್ದಾರೆ.

ಕಾಡಾನೆ ದಾಳಿಯಿಂದ ಓರ್ವ ಮಹಿಳೆಗೆ ಸಣ್ಣಪುಟ್ಟ ಗಾಯವಾಗಿದ್ದು, ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ಕೊಡಿಸಲಾಗುತ್ತಿದೆ.

ಅದೃಷ್ಟವಶಾತ್ ಹೆಚ್ಚಿನ ಪ್ರಾಣ ಹಾನಿಯಾಗಿಲ್ಲ. ನೀರು ಕುಡಿಯಲು ನದಿಗೆ ಬಂದ ಕಾಡಾನೆ ಏಕಾಏಕಿ ಪ್ರವಾಸಿಗರ ಮೇಲೆರಗಿದೆ. ಒಂಟಿ ಸಲಗ ಪ್ರವಾಸಿಗರ ಮೇಲೆ ದಾಳಿ ಮಾಡುವ ದೃಶ್ಯ ಸ್ಥಳೀಯರ ಮೊಬೈಲ್‌ನಲ್ಲಿ ಸೆರೆಯಾಗಿದೆ. ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿದ್ದು, ಪರಿಶೀಲನೆ ನಡೆಸಲಾಗುತ್ತಿದೆ.

**ಪ್ರವಾಸಿಗರ ಮೇಲೆ ಕಾಡಾನೆ ದಾಳಿ :** ಸಿಎಂ, ಡಿಸಿಎಂಗೆ ರೈತರ ಬಗ್ಗೆ ಕಾಳಜಿಯೇ ಇಲ್ಲ – ನಿಖಿಲ್ ಕುಮಾರಸ್ವಾಮಿ ಕಿಡಿ: ಕಾಡಾನೆ ಹಾವಳಿ ನಿಯಂತ್ರಿಸುವಲ್ಲಿ ಚನ್ನಪಟ್ಟಣ ಶಾಸಕರು ಅಸಹಾಯಕರು, ಅರಣ್ಯ ಸಚಿವರು ಇಲ್ಲಿಗೆ ಬಂದಿಲ್ಲ. ಸರ್ಕಾರ ಗ್ಯಾರಂಟಿ ಕೊಡುತ್ತೆ ಆದ್ರೆ ರೈತರಿಗೆ ಬೆಳೆ ಗ್ಯಾರಂಟಿ ಇಲ್ಲ. ಸಿಎಂ, ಡಿಸಿಎಂಗೆ ರೈತರ ಬಗ್ಗೆ ಕಾಳಜಿಯೇ ಇಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕಿಡಿಕಾರಿದರು.

**ನಿಖಿಲ್ ಕುಮಾರಸ್ವಾಮಿ:** ಚನ್ನಪಟ್ಟಣ ತಾಲೂಕಿನ ಬಿ.ವಿ. ಹಳ್ಳಿ ಗ್ರಾಮದಲ್ಲಿ ಕಾಡಾನೆ ದಾಳಿಯಿಂದ ಸಂಕಷ್ಟಕ್ಕೀಡಾಗಿ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿದ್ದ ರೈತರನ್ನು ಭೇಟಿ ಮಾಡಿ ಮಾತನಾಡಿದ ಅವರು, ಕಳೆದ ಹಲವು ವರ್ಷಗಳಿಂದ ರಾಮನಗರ ಜಿಲ್ಲೆಯಲ್ಲಿ ಕಾಡಾನೆ ಸಮಸ್ಯೆ ತಾಂಡವವಾಡುತ್ತಿದೆ. ಜಿಲ್ಲೆಗೆ 120 ಕಿಲೋಮೀಟರ್ ರೈಲ್ವೆ ಬ್ಯಾರಿಕೇಡ್ ಬೇಕಿದ್ದು, ಆದರೆ ಬಜೆಟ್‌ನಲ್ಲಿ ಕಾಡಾನೆ ನಿಯಂತ್ರಣಕ್ಕೆ ಕೊಟ್ಟಿರುವ ಹಣ ಯಾವುದಕ್ಕೂ ಸಾಕಾಗುವುದಿಲ್ಲ. ಸರ್ಕಾರ ಇಡೀ ರಾಜ್ಯಕ್ಕೆ ಮೀಸಲಿಟ್ಟಿರುವುದು ಕೇವಲ 260 ಕೋಟಿ ರೂ. ಮಾತ್ರ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

**ರೈತರ ಪ್ರತಿಭಟನೆ :** ಈ ಜಿಲ್ಲೆಯನ್ನು ಸ್ವತಃ ಉಪ ಮುಖ್ಯಮಂತ್ರಿಗಳೇ ಪ್ರತಿನಿಧಿಸುತ್ತಿದ್ದರೂ ರೈತರಿಗೆ ರಕ್ಷಣೆ ಸಿಕ್ಕಿಲ್ಲ. ಆದರೆ ಕೇಂದ್ರ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರ ಅರಣ್ಯ ಸಚಿವರನ್ನು ಕರೆಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ್ದಾರೆ. ಸರ್ಕಾರದ ಅರಣ್ಯ ಸಚಿವರನ್ನು ಇಲ್ಲಿಗೆ ಕರೆತರುವ ಕೆಲಸ ಆಗುತ್ತಿಲ್ಲ. ಇಲ್ಲಿಗೆ ಬಂದು ರೈತರ ಕಷ್ಟ ಕೇಳುವ ಸೌಜನ್ಯವೂ ಸಚಿವರಿಗೆ ಇಲ್ಲ. ನಿತ್ಯ ರೈತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ಸರ್ಕಾರ ಸ್ಪಂದಿಸುತ್ತಿಲ್ಲ. ಸರ್ಕಾರ ಟಿಗ್ಯಾರಂಟಿಗಳನ್ನು ಕೊಡುತ್ತಿದ್ದೇವೆಟಿ ಎನ್ನುತ್ತದೆ, ಆದರೆ ಅನ್ನದಾತರಿಗೆ ಯಾವ ಗ್ಯಾರಂಟಿ ಇಲ್ಲ. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳಿಗೆ ಈ ಸಮಸ್ಯೆಗಳ ಬಗ್ಗೆ ಗಮನಹರಿಸಲು ಸಮಯವೇ ಇಲ್ಲ ಎಂದು ಅವರು ಹರಿಹಾಯ್ದರು. ರೈತರ ಈ ನ್ಯಾಯಯುತ ಹೋರಾಟಕ್ಕೆ ಪಕ್ಷಾತೀತವಾಗಿ ನಮ್ಮ ಸಂಪೂರ್ಣ ಬೆಂಬಲವಿದೆ. ಸರ್ಕಾರ ಈ ಕೂಡಲೇ ಎಚ್ಚೆತ್ತು ಇದಕ್ಕೆ ಶಾಶ್ವತ ಪರಿಹಾರ ಕೊಡಬೇಕೆಂಬುದು ನಿಖಿಲ್ ಕುಮಾರಸ್ವಾಮಿ ಆಗ್ರಹಿಸಿದರು.

# ಅಂಗಡಿ, ವಿದ್ಯುತ್ ಕಂಬಕ್ಕೆ ಡಿಕ್ಕಿಯಾಗಿ ಕಾರು ಪಲ್ಟಿ ನೂತನ ವಧು-ವರ ಪಾರು-ದಂಡ ವಿಧಿಸಿದ ಪೊಲೀಸರು



**ಚಿಕ್ಕಮಗಳೂರು,ಏ.25**–ಚಲಿಸುತ್ತಿದ್ದ ಕಾರೊಂದು ನಿಯಂತ್ರಣ ತಪ್ಪಿ ಅಂಗಡಿ ಹಾಗೂ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾದ ಘಟನೆ ಜಿಲ್ಲೆಯ ಎನ್.ಆರ್. ಪುರ ತಾಲೂಕಿನ ಬಿ.ಹೆಚ್. ಕೈಮರ ಬಳಿ ಸಂಭವಿಸಿದೆ. ಅಪಘಾತದಲ್ಲಿ ಕಾರಿನ ಲ್ಲಿದ್ದ ನೂತನ ವಧು-ವರ, ಇತರರು ಸಣ್ಣಪುಟ್ಟ ಗಾಯಗಳೊಂದಿಗೆ ಹೆಚ್ಚಿನ ಅಪಾಯದಿಂದ ಪಾರಾಗಿದ್ದಾರೆ.

ನವದಂಪತಿ ಕೆಲ ಗಂಟೆಗಳ ಹಿಂದಷ್ಟೇ ಮದುವೆಯಾಗಿ ಕಾರಿನಲ್ಲಿ ಮನೆಗೆ ಹೊರಟಿದ್ದರು. ಬಾಳೆಹೊನ್ನೂರಿನ ರಂಭಾಪುರಿ ಮಠದಲ್ಲಿ ಮದುವೆ ಮುಗಿಸಿಕೊಂಡು ದಾವಣಗೆರೆಗೆ ತೆರಳುತ್ತಿದ್ದ ವೇಳೆ ಕಾರು ರಸ್ತೆ ಬದಿಯ ಅಂಗಡಿಯ ಕಟ್ಟೆ ಹಾಗೂ ಉಪ್ಪಿನ ಮೂಟೆಗಳಿಗೆ ಡಿಕ್ಕಿ ಹೊಡೆದಿದೆ. ಬಳಿಕ ವಿದ್ಯುತ್ ಮತ್ತು ಟೆಲಿಫೋನ್ ಕಂಬಗಳಿಗೂ ಅಪ್ಪಳಿಸಿ, ರಸ್ತೆಯಲ್ಲೇ ಪಲ್ಟಿಯಾಗಿ ಬಾಳೆಹೊನ್ನೂರಿನ ಕಡೆಗೆ ಮುಖ ಮಾಡಿ ಬಿದ್ದಿದೆ.

ಸ್ವತಃ ಮದುಮಗನೇ ಚಾಲನೆ ಮಾಡುತ್ತಿದ್ದು, ನವವಧು ಸೇರಿದಂತೆ ಕುಟುಂಬಸ್ಥರು ಕಾರಿನಲ್ಲಿದ್ದರು. ಎಲ್ಲರೂ ಸಣ್ಣಪುಟ್ಟ ಗಾಯಗಳೊಂದಿಗೆ ಪ್ರಾಣಾಪಾ ಯದಿಂದ ಪಾರಾಗಿದ್ದಾರೆ. ಎನ್.ಆರ್. ಪುರ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದ್ದು, ಕೂಡಲೇ ಪೊಲೀ ಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಅಜಾಗರೂಕ ಕಾರು ಚಾಲನೆಗೆ ದಂಡ: ಈ ಕುರಿತು ಎನ್.ಆರ್. ಪುರ ಪೊಲೀಸ್ ಠಾಣಾಧಿಕಾರಿ ಟಿಈಟಿವಿ ಭಾರತಕ್ಕೆ ಪ್ರತಿಕ್ರಿಯೆ ನೀಡಿದ್ದು, ಕಾರಿನಲ್ಲಿದ್ದವರು ದಾವಣಗೆರೆ ಮೂಲದವರು. ನೂತನ ವಧು-ವರರು ಬಾಳೆಹೊನ್ನೂರಿನಲ್ಲಿ ಮದುವೆ ಮಾಡಿಕೊಂಡು ವಾಪಸ್ ದಾವಣಗೆರೆಗೆ ಹೋಗುವ ವೇಳೆ ಎನ್.ಆರ್. ಪುರ ನಗರದ ಕೈಮರ ಬಳಿ ಅಪಘಾತ ಸಂಭವಿಸಿದೆ. ಮದುಮಗ ಕಾರು ಚಾಲನೆ ಮಾಡುತ್ತಿದ್ದು, ಪಕ್ಕದ

# ಚಾಮುಂಡಿ ಬೆಟ್ಟಕ್ಕೆ ಭೇಟಿ ಭರವಸೆ ಹಿನ್ನೆಲೆ ರಣವೀರ್ ವಿರುದ್ಧದ ಪ್ರಕರಣ ಇತ್ಯರ್ಥ ಪೊಲೀಸರ ಕಾರ್ಯವೈಖರಿ ಬಗ್ಗೆ ಹೈಕೋರ್ಟ್ ವ್ಯಂಗ್ಯ

**ಬೆಂಗಳೂರು,ಏ.25**–ಕಾಂತಾರ ಚಾಪ್ಟರ್-1 ಚಿತ್ರದ ದೈವಪಾತ್ರದ ಬಗ್ಗೆ ಅಪಮಾನಕಾರಿಯಾಗಿ ಸನ್ನೆ ಮಾಡಿ ಮಾತನಾಡಿದ ಆರೋಪ ಎದುರಿಸುತ್ತಿರುವ ಬಾಲಿವುಡ್ ನಟ ರಣವೀರ್ ಸಿಂಗ್ ಮುಂದಿನ ಒಂದು ತಿಂಗಳಲ್ಲಿ ಮೈಸೂರಿನ ಚಾಮುಂಡಿ ಬೆಟ್ಟ ದೇವಸ್ಥಾನಕ್ಕೆ ಭೇಟಿ ನೀಡಲು ನಿರ್ದೇಶಿಸಲಾಗುವುದು ಎಂದು ತಿಳಿಸಿರುವ ಹೈಕೋರ್ಟ್ ಅರ್ಜಿಯನ್ನು ಇತ್ಯರ್ಥ ಪಡಿಸಿದೆ.

ಗೋವಾದಲ್ಲಿ ನಡೆದಿದ್ದ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ (ಐಎಫ್‌ಎಫ್‌ಐ) ಕಾಂತಾರ ಚಾಪ್ಟರ್-1 ಚಿತ್ರದ ಚಾಮುಂಡಿ ದೈವಕ್ಕೆ ಅಪಮಾನ ಮಾಡಿದ ಆರೋಪದ ಸಂಬಂಧ ದಾಖಲಾಗಿರುವ ಖಾಸಗಿ ದೂರು ಮತ್ತು ಅದರ ಮುಂದುವರಿದ ಭಾಗವಾಗಿ ಬೆಂಗಳೂರಿನ ಹೈಗ್ರೌಂಡ್ಸ್ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ರಣವೀರ್ ಸಿಂಗ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.


ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ, ಮುಂದಿನ ನಾಲ್ಕು ವಾರಗಳಲ್ಲಿ ರಣವೀರ್ ದೇವಸ್ಥಾನಕ್ಕೆ ಭೇಟಿ ನೀಡಬೇಕು ಎಂದು ಆದೇಶದಲ್ಲಿ ಉಲ್ಲೇಖಿಸಲಾಗುವುದು ಎಂದು ತಿಳಿಸಿ ಅರ್ಜಿಯನ್ನು ಇತ್ಯರ್ಥಪಡಿಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ರಣವೀರ್ ಬೇಷರತ್ ಕ್ಷಮೆಯಾಚಿಸಿರುವ ಪ್ರಮಾಣ ಪತ್ರ ಸಲ್ಲಿಸಿದ್ದೇವೆ. ದೇವಸ್ಥಾನಕ್ಕೆ ರಣವೀರ್ ಸಿಂ ಗ್ ಭೇಟಿ ನೀಡುತ್ತಾರೆ ಎಂದು ಹೇಳಲಾಗಿದೆ. ದಿನಾಂಕ ಹಾಕಿಲ್ಲ. ಪೀಠವೇ ನಿರ್ದಿಷ್ಟ ದಿನ ನಿಗದಿ ಮಾಡಬಹುದು. ಅಂದು ರಣವೀರ್ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ ಎಂದು ಪೀಠಕ್ಕೆ ತಿಳಿಸಿದರು.

ದೂರುದಾರರ ಪರ ವಕೀಲರು, ದೇವಸ್ಥಾನಕ್ಕೆ ಭೇಟಿ ನೀಡಲಾಗುವುದು ಎಂದು ಅರ್ಜಿದಾರರು ಪ್ರಮಾಣಪತ್ರ ಸಲ್ಲಿಸಿದ್ದಾರೆ. ಆದರೆ, ಸಮಯವನ್ನು ತಿಳಿಸಿಲ್ಲ. ಎಷ್ಟು ದಿನ ಆಗುತ್ತದೆ ಎನ್ನುವುದು ಗೊತ್ತಿಲ್ಲ ಎಂದರು.

ಪೊಲೀಸರ ನಡೆಗೆ ಹೈಕೋರ್ಟ್ ಅಸಮಾಧಾನ:





ಅರ್ಜಿದಾರರ ಪರ ವಕೀಲರು, ರಣವೀರ್ ಸಿಂಗ್ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಲು ಭದ್ರತೆ ಸಮಸ್ಯೆಯಿದೆ ಎಂದು ತಿಳಿಸಿದರು. ಇದಕ್ಕೆ ದೂರುದಾರರ ಪರ ವಕೀಲರು, ಕರ್ನಾಟಕ ಪೊಲೀಸರು ಶಕ್ತಿಯುತವಾಗಿದ್ದು, ರಕ್ಷಣೆ ನೀಡುತ್ತಾರೆ ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಕರ್ನಾಟಕ ಪೊಲೀಸರು ಎಷ್ಟು ಬಲಶಾಲಿಗಳು ಎಂದರೆ ಅವರು ಲಿವ್ ಇನ್ ಸಂಬಂಧ, ದಂಪತಿಯ ಪ್ರಕರಣಗಳ ಹಿಂದೆ ಹೋಗುತ್ತಾರೆ. ನೈಜ ಅಪರಾಧಗಳನ್ನು ಯಾರೂ ತನಿಖೆ ಮಾಡುತ್ತಿಲ್ಲ. ಎಲ್ಲರೂ ಬಿಎನ್‌ಎಸ್ ಸೆಕ್ಷನ್ 69ರ (ಮದುವೆ ನೆಪದಲ್ಲಿ ಲೈಂಗಿಕ ದುರ್ಬಳಕೆ ಸಂಬಂಧಿತ ಅಪರಾಧಗಳು) ಅಡಿ ಅಪರಾಧಗಳನ್ನು ಮಾತ್ರ ತನಿಖೆ ಮಾಡುತ್ತಾರೆ ಎಂದು ವ್ಯಂಗ್ಯವಾಡಿತು.

ಪ್ರಕರಣದ ಹಿನ್ನೆಲೆ : 2025ರ ನವೆಂಬರ್ 28ರಂದು ಗೋವಾದಲ್ಲಿ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ್ದ ರಣವೀರ್ ಸಿಂಗ್, ಕಾಂತಾರ ಚಲನಚಿತ್ರದಲ್ಲಿ ಚಿತ್ರಿಸಲಾದ ಪವಿತ್ರ ದೈವ (ದೈವ ಕೋಲ) ಸಂಪ್ರದಾಯವನ್ನು ಬಹಿರಂಗವಾಗಿ ಅಪಹಾಸ್ಯ ಮಾಡಿದ್ದಾರೆ. ವೇದಿಕೆಯಲ್ಲಿದ್ದ ಸಿಂಗ್ ಅವರು ಪಂಜುರ್ಲಿ/ಗುಳಿಗ ದೈವದ (ಕರಾವಳಿ ಕರ್ನಾಟಕ ಪ್ರದೇಶದಲ್ಲಿ ಪೂಜಿಸಲ್ಪಡುವ ಪವಿತ್ರ ಶಕ್ತಿ) ದೈವಿಕ ಅಭಿವ್ಯಕ್ತಿಗಳನ್ನು ಅಸಭ್ಯ, ಅವಹೇಳನಕಾರಿ ಮತ್ತು ಹಾಸ್ಯಮಯ ರೀತಿಯಲ್ಲಿ ಅನುಕರಿಸಿದ್ದಾರೆ. ಪವಿತ್ರ ದೈವವನ್ನು ಭೂತ (ಸ್ತ್ರೀ ಭೂತ) ಎಂದು ಮೌಖಿಕವಾಗಿ ಉಲ್ಲೇಖಿಸಿದ್ದಾರೆ.


ಚಿತ್ರದಲ್ಲಿ ಅದು ನಮ್ಮ ರಾಜ್ಯದ ಅಧಿದೇವತೆ ಚಾಮುಂಡೇಶ್ವರಿಯಾಗಿದ್ದು, ನಮ್ಮ ಸಂಸ್ಕೃತಿ ಮತ್ತು ಧಾರ್ಮಿಕ ನಂಬಿಕೆಯಲ್ಲಿ ದೈವವು ದೆವ್ವವಲ್ಲ. ದೇವರನ್ನು ಭೂತ ಎನ್ನುವ್ ಮೂಲಕ ರಣವೀರ್ ಅವರಿಂದ ದೇವದೂಷಣೆಯಾಗಿದೆ ಮತ್ತು ಹಿಂದೂ ನಂಬಿಕೆಗಳಿಗೆ ಉದ್ದೇಶಪೂರ್ವಕ ನೋವುಂಟು ಮಾಡಲಾಗಿದೆ.

ಲಕ್ಷಾಂತರ ಅನುಯಾಯಿಗಳನ್ನು ಹೊಂದಿರುವ ನಟರೊಬ್ಬರು ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಇಂಥ ವ್ಯಂಗ್ಯ ಪ್ರದರ್ಶಿಸುವ ಮೂಲಕ ಕಾಂತಾರ ಚಲನಚಿತ್ರ ಮಾತ್ರವಲ್ಲದೇ, ತುಳು ಸಂಪ್ರದಾಯದಲ್ಲಿ ಆಳವಾಗಿ ಬೇರೂರಿರುವ ಆಧ್ಯಾತ್ಮಿಕ ನಂಬಿಕೆಗಳನ್ನು ಅಪಹಾಸ್ಯ ಮಾಡಿದ್ದಾರೆ.

ಇದು ದೈವ ಭಕ್ತರು ಮತ್ತು ಸಾರ್ವಜನಿಕರಿಗೆ ತೀವ್ರ ಮಾನಸಿಕ ಯಾತನೆ, ಕೋಪ ಮತ್ತು ಅಸಮಾಧಾನ ಉಂಟುಮಾಡಿದೆ. ಇದು ಸಾರ್ವಜನಿಕ ಶಾಂತಿ ಭಂಗಗೊಳಿಸುವ ಮತ್ತು ಸಮುದಾಯಗಳ ನಡುವೆ ದ್ವೇಷ ಉತ್ತೇಜಿಸಬಹುದು ಎಂದು ಆರೋಪಿಸಿ ದೂರು ನೀಡಲಾಗಿತ್ತು. ದೂರಿನ ಸಂಬಂಧ ರಣವೀರ್ ಸಿಂಗ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಕಲಂಗಳ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಇದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ಮೈಸೂರು: ದಾಖಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶದ ಬಗ್ಗೆ ಎಂಎಲ್‌ಸಿ ವಿಶ್ವನಾಥ್ ಕಳವಳ

**ಮೈಸೂರು,ಏ.25**–ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದೆ, ಈ ನಡುವೆ ಗ್ರೇಸ್ ಮಾರ್ಕ್ ನೀಡಿ ವಿದ್ಯಾರ್ಥಿಗಳನ್ನು ಪಾಸ್ ಮಾಡಿದರೆ ಮುಂದೆ ಅವರ ಭವಿಷ್ಯ ಏನು? ಎಂದು ವಿಧಾನ ಪರಿಷತ್ ಸದಸ್ಯ ಎಚ್. ವಿಶ್ವನಾಥ್ ಕಳವಳ ವ್ಯಕ್ತಪಡಿಸಿದರು.



ಮೈಸೂರು ಪರ್ತಕರ್ತರ ಭವನದಲ್ಲಿಂದು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ಫಲಿತಾಂಶ ನೋಡಿದರೆ ಹಿಂದೆಂದೂ ಕಂಡರಿಯದ ರೀತಿಯಲ್ಲಿ ಫಲಿತಾಂಶ ಬಂದಿದೆ. ಇದು ಹೇಗೆ ಸಾಧ್ಯವಾಯಿತು?, ರಾಜ್ಯದ ಶಿಕ್ಷಣ ವ್ಯವಸ್ಥೆ ಸಂಪೂರ್ಣ ಹದಗೆಟ್ಟು ಹೋಗಿದೆ. ನಾನು ಕೂಡ ಶಿಕ್ಷಣ ಸಚಿವನಾಗಿದ್ದವನು. ಇಂಟರ್ನಲ್ ಮಾರ್ಕ್ಸ್ 20ಕ್ಕೆ 20 ಅನ್ನು ಕೊಡುತ್ತಾರೆ. ಇನ್ನು ಉಳಿದ 80 ಮಾರ್ಕ್ಸ್ ನಲ್ಲಿ 13 ನಂಬರ್ ತೆಗೆದರೆ ಪಾಸ್. ಈ ರೀತಿಯಾದರೆ ಶಿಕ್ಷಣ ವ್ಯವಸ್ಥೆ ಎಲ್ಲಿಗೆ ಹೋಗಬೇಕು?. ಪಾಸಾದ ವಿದ್ಯಾರ್ಥಿಗಳು ಮುಂದೆ ಏನು ಮಾಡಬೇಕು ಎಂದು ಪ್ರಶ್ನಿಸಿದರು.

ಸರ್ಕಾರಿ ಶಾಲೆಯಲ್ಲಿ ಶಿಕ್ಷಕರ ಕೊರತೆ: ಯಾದಗಿರಿ ಜಿಲ್ಲೆಯಲ್ಲಿ 41%, ಬಳ್ಳಾರಿ 31%, ಬೀದರ್ 21% ಶಿಕ್ಷಕರ ಕೊರತೆ ಇದ್. ಹೀಗೆ ಎಲ್ಲಾ ಜಿಲ್ಲೆಗಳಲ್ಲೂ ಶಿಕ್ಷಕರ ಕೊರತೆ ಇದೆ. ಆದರೂ ಫಲಿತಾಂಶ ನೋಡಿದರೆ ದಾಖಲೆ ಫಲಿತಾಂಶ ಬಂದಿದೆ. ಶಿಕ್ಷಣ ಇಲಾಖೆಯ ಅಭಿವೃದ್ಧಿಗೆ ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕಿನಲ್ಲಿ 2 ಸಾವಿರ ಕೋಟಿ ರೂಪಾಯಿ ಸಾಲ ಮಾಡಿದ್ದಾರೆ ಎಂದರು. ಆ ಹಣದಲ್ಲೂ ಕಿಕ್ ಬ್ಯಾಕ್ ತಗೋತಾರೆ. ಮೌಲ್ಯ ಮಾಪನ್ ಕೇಂದ್ರಕ್ಕೆ ಶಿಕ್ಷಣ ಸಚಿವರು ಹೋಗಿದ್ದಾರೆ ಎಂದರೆ ಏನರ್ಥ?, ಇಂಟರ್ನಲ್ 20ಕ್ಕೆ 20 ಕೊಡಿ ಅಂತ ಇವರೇ ಹೇಳಿದ್ದಾರೆ. ಈ ಮೂಲಕ ಮಗುವಿನ ಓದುವ ಉತ್ಸಾಹವನ್ನೇ ಕಸಿದಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಸರಿಯಾದ ಮೂಲಭೂತ ವ್ಯವಸ್ಥೆಗಳೇ ಇಲ್ಲ. ಸಿಬ್ಬಂದಿ, ಶಿಕ್ಷಕರ ಕೊರತೆ ನಡುವೆಯೂ ಇಷ್ಟೊಂದು ದೊಡ್ಡ ಮಟ್ಟದ ಫಲಿತಾಂಶ ಬರಲು ಹೇಗೆ ಸಾಧ್ಯವಾಯಿತು?. ಮುಂದೆ ಪಿಯುಸಿಯಲ್ಲಿ ಡ್ರಾಪೌಟ್ ಆಗುವ ಸಾಧ್ಯತೆ ಹೆಚ್ಚಾಗುತ್ತದೆ. ಇಂತಹ ಆಯೋಗ್ಯ ಶಿಕ್ಷಣ ಸಚಿವನನ್ನು ಇಟ್ಟುಕೊಂಡು ರಾಜ್ಯದ ಗತಿ ಏನಾಗಬೇಕು ಎಂದು ಕಿಡಿಕಾರಿದರು.

ಹಿಂದಿಗೆ ಗ್ರೇಡ್ ಕೊಡುವ ವಿಚಾರದಲ್ಲಿ ಕೋರ್ಟ್ ರಾಜ್ಯ ಸರ್ಕಾರಕ್ಕೆ ಛೀಮಾರಿ ಹಾಕಿದೆ. ಹಿಂದಿ ಭಾಷೆಗೆ ಗ್ರೇಡ್ ಬದಲು ಅಂಕಗಳನ್ನೇ ಕೊಡುವಂತೆ ನ್ಯಾಯಾಲಯ ಛೀಮಾರಿ ಹಾಕಿತು. ಕೋರ್ಟ್ ಛೀಮಾರಿ ಹಾಕಿದ ಎರಡೇ ದಿನಕ್ಕೆ ಫಲಿತಾಂಶ ಪ್ರಕಟ ಆಯ್ತು?. ಹಾಗಾದರೆ ಮಾರ್ಕ್ಸ್ ಎರಡೇ ದಿನಗಳಲ್ಲಿ ಹೇಗೆ ಕೊಟ್ಟಿರಿ?. ಶಿಕ್ಷಣ ಸಚಿವ ಮಧು ಬಂಗಾರಪ್ಪ ಪಿಯುಸಿ ಫೇಲ್. ಅವನನ್ನು ಶಿಕ್ಷಣ ಸಚಿವನನ್ನಾಗಿ ಮಾಡಿದ್ದಾರೆ. ಸಿದ್ದರಾಮಯ್ಯನಿಗೆ ಬುದ್ಧಿ ಇಲ್ಲ. ಬರೀ ಮಧು ಅಂತ ಹೆಸರಿಟ್ಟಿಕೋ. ಮಧು ಬಂಗಾರಪ್ಪ ಅಂತ ನಿಮ್ಮಪ್ಪನ ಹೆಸರಿಟ್ಟುಕೊಂಡು ಅವರಿಗೆ ಯಾಕೆ ಕೆಟ್ಟ ಹೆಸರು ತರುತ್ತೀಯಾ ಎಂದು ಹೆಚ್ ವಿಶ್ವನಾಥ್ ಹರಿಹಾಯ್ದರು. ಶೋಷಿತ ಸಮುದಾಯಗಳಿಗೆ ಅನ್ಯಾಯ? ಒಳ ಮೀಸಲಾತಿ ಹಂಚಿಕೆಯಲ್ಲಿ ಶೋಷಿತ ಸಮುದಾಯಗಳಿಗೆ ಅನ್ಯಾಯವಾಗಿದೆ. ಸಚಿವ ಮಹದೇವಪ್ಪ ಶೋಷಿತ ಸಮುದಾಯಕ್ಕೆ ಮಾರಕ.

# ಅಂಬೇಡ್ಕರ್ ಭಾವಚಿತ್ರಕ್ಕೆ ಸೆಗಣಿ ಬಳಿದ ಆರೋಪಿ ಬಂಧನ

ಕನ್ನಡ ಮಾತೃ ಭೂಮಿ ವಾರ್ತೆ



**ಕುಕುನೂರು,** ತಾಲೂಕಿನ ವೀರಾಪುರ ಗ್ರಾಮದಲ್ಲಿ ಏಪ್ರಿಲ್ 15 ಮಧ್ಯರಾತ್ರಿ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇ ಡ್ಕರ್, ಜಗಜ್ಯೋತಿ ಬಸವೇಶ್ವರ, ರಮಾ ಬಾಯಿ ಅಂಬೇಡ್ಕರ್ ಅವರ ಸೇರಿದಂತೆ ಅನೇಕ ಮಹಾನ್ ವ್ಯಕ್ತಿಗಳ ಭಾವಚಿತ್ರಕ್ಕೆ ಸಗಣಿ ಬಳಿದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ವೀರಾಪುರ ಗ್ರಾಮರ ಶಿವಕುಮಾರ ಕಡೇಮನಿ (23 ) ಬಂಧಿತ ಆರೋಪಿ ಆಗಿದ್ದಾನೆ. ಗ್ರಾಮದಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಲು ಸಂಘಟಕರು ದೇಣಿಗೆ ಹಣ ಸಂಗ್ರಹಿಸಲು ಈತನಿಗೆ ಜವಾಬ್ದಾರಿ ನೀಡಿದ್ದರು ಏನಲಾಗಿದೆ. ಒಟ್ಟು 14000 ಸಂಗ್ರವಾದ ಹಣದಲ್ಲಿ ಈತನು ವೈಯಕ್ತಿಕವಾಗಿ 7,000 ಸ್ವಂತಕ್ಕೆ ಬಳಕೆ ಮಾಡಿಕೊಂಡಿದ್ದನಂತೆ ಸಂಘಟಕರು ಹಣ ಕೊಡುವಂತೆ ಕೇಳಿದಾಗ ಹಣ ಹೊಂದಿಸಲಕ್ಕೆ ಸಾಧ್ಯವಾಗದ ಕಾರಣ ಏಪ್ರಿಲ್ 20ರಂದು ನಡೆಯಬೇಕಾಗಿದ್ದ ಜಯಂತಿಯನ್ನು ಹೇಗಾದರೂ ಮಾಡಿ ಮುಂದೋಡಲು ಆಲೋಚಿಸಿ ಇಂತಹ ದುಷ್ಕೃತ್ಯವನ್ನು ಎಸೆಗಿದ್ದಾನೆ. ಎಂದು ಪೊಲೀಸರ ವಿಚಾರ ವೇಳೆಯಲ್ಲಿ ಬಾಯಿ ಬಿಟ್ಟಿದ್ದಾನೆ ಎಂದು ತಿಳಿದುಬಂದಿದೆ.

ದಲಿತ ಸಂಘಟನೆಗಳು ಇಂತಹ ದುಷ್ಕೃತ್ಯವನ್ನು ಎಸೆಗಿದ ಆರೋಪಿಯನ್ನು ಬಂಧಿಸುವಂತೆ ಪ್ರತಿಭಟಿಸಿ ಪೋಲಿಸ್ ಇಲಾಖೆಗೆ ಒತ್ತಾಯಿಸಿದ್ದವು ತಲೆಮರಸಿಕೊಂಡಿದ್ದ ಆರೋಪಿಯನ್ನು ಪೊಲೀಸರು ಕೊನೆಗೂ ಪತ್ತೆ ಹಚ್ಚಿ ಎಸ್‌ಸಿ/ಎಸ್‌ಟಿ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲ ಮಾಡಿಕೊಂಡಿದ್ದಾರೆ.

ಆರೋಪಿಯನ್ನು ಪತ್ತೆಹಚ್ಚಲು ಡಿವೈಎಸ್ಪಿ ಮುತ್ತಣ್ಣ ಸಾವರ್ ಗೋಳು, ಯಲಬುರ್ಗಾ ಸಿಪಿಐ ಮೌನೇಶ್ವರ ಪಾಟೀಲ್, ಕುಕನೂರು ಪಿಎಸ್‌ಐ ಪಿ. ನಾಯಕ ಅವರು ಆರೋಪಿ ಪತ್ತೆಗೆ ಬಲೆ ಬೀಸಿದ್ದರು.

# ಕನ್ನಡ ನಾಡು-ನುಡಿಗೆ ಡಾ.ರಾಜ್ ಕುಮಾರ್ ನೀಡಿದ ಕೊಡುಗೆ ಅಪಾರ - ಮುಂಡರಗಿ ನಾಗರಾಜ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಕನ್ನಡ ಚಿತ್ರರಂಗದ ಧ್ರುವತಾರೆ, ಕರ್ನಾಟಕ ರತ್ನ ಡಾ. ರಾಜ್‌ಕುಮಾರ್ ಅವರ 97ನೇ ಜನ್ಮದಿನದ ಅಂಗವಾಗಿ ಶುಕ್ರವಾರ ಜಿಲ್ಲಾಡಳಿತ, ಜಿ.ಪಂ., ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿನ ಡಾ.ರಾಜ್ ಕುಮಾರ್ ಅವರ ಪುತ್ಥಳಿಗೆ ಮಾಲಾರ್ಪಣೆ ಹಾಗೂ ಪುಷ್ಪ ನಮನ ಸಲ್ಲಿಸುವ ಮೂಲಕ ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳು, ವಿವಿಧ ಸಂಘ-ಸಅಸ್ಥೆಗಳ ಪದಾಧಿಕಾರಿಗಳು ಅಭೂತ ಗೌರವ ನಮನ ಸಲ್ಲಿಸಿದರು.



ಈ ವೇಳೆ ಡಾ.ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಡಾ. ರಾಜ್‌ಕುಮಾರ್ ಅವರು ಅಪ್ಪಟ ಕನ್ನಡ ಪ್ರೇಮಿಯಾಗಿದ್ದರು. ಅವರ ಸಾಧನೆ ಹಾಗೂ ಕನ್ನಡ ನಾಡು-ನುಡಿಗೆ ಅವರು ನೀಡಿದ ಕೊಡುಗೆ ಅಪಾರ. ಕರ್ನಾಟಕ ಏಕೀಕರಣ ಮತ್ತು ಕನ್ನಡ ಭಾಷೆಯ ಉಳಿವಿಗಾಗಿ ನಡೆದ ಗೋಕಾಕ್ ಚಳುವಳಿಯಲ್ಲಿ ಡಾ. ರಾಜ್ ಅವರ ಪಾತ್ರ ಅವಿಸ್ಮರಣೀಯ. ಅವರ ನಾಯಕತ್ವದಲ್ಲಿ ನಡೆದ ಈ ಹೋರಾಟ ಕನ್ನಡ ಭಾಷೆಯ ಇತಿಹಾಸದಲ್ಲಿ ಮೈಲಿಗಲ್ಲಾಗಿದೆ ಎಂದು ಹೇಳಿದರು.

ಡಾ.ರಾಜ್ ಕುಮಾರ್ ಅವರು ಅಂದಿನ ಕಾಲದ ಖ್ಯಾತ ನಟ ಅಮಿತಾಬ್ ಬಚ್ಚನ್ ಅವರು ಕೇವಲ ಒಂದು ಗಂಟೆಯ ಕಾಲ ತಮ್ಮ ಸಿನಿಮಾದಲ್ಲಿ ನಟಿಸಲು ಕೇಳಿಕೊಂಡಾಗಲೂ, ನಾನು ಕನ್ನಡ ಬಿಟ್ಟು ಬೇರೆ ಭಾಷೆಯಲ್ಲಿ ನಟಿಸುವುದಿಲ್ಲ ಎಂದು ಖಡಾಖಂಡಿತವಾಗಿ ನಿರಾಕರಿಸಿದ ಅವರ ಬದ್ಧತೆಯನ್ನು ನಾವು ಸ್ಮರಿಸಬೇಕು ಎಂದರು.

ಬಅಗಾರದ ಮನುಷ್ಯ' ಸಿನಿಮಾದ ಮೂಲಕ ನೂರಾರು ಯುವಕರು ನಗರ ಪ್ರದೇಶದಿಂದ ಮರಳಿ ತಮ್ಮ ಹಳ್ಳಿಗಳಿಗೆ ಹೋಗಿ ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡಿದ ಸಂಗತಿಯನ್ನು ಮೆಲುಕು ಹಾಕಿದರು.

ಡಾ. ರಾಜ್‌ಕುಮಾರ್ ಅವರ ಜನ್ಮದಿನವನ್ನು ಸರ್ಕಾರಿ ಮಟ್ಟದಲ್ಲಿ ಅಧಿಕೃತವಾಗಿ ಆಚರಿಸಲು ನಿರ್ಧರಿಸಿದ ಸರ್ಕಾರದ ಕ್ರಮಕ್ಕೆ ಅಭಿನಂದನೆ ತಿಳಿಸಿದ ಅವರು, ಸಿನಿಮಾ ಕ್ಷೇತ್ರದ ಅತ್ಯುನ್ನತ ಪ್ರಶಸ್ತಿಯಾದ ದಾದಾಸಾಹೇಬ್ ಫಾಲ್ಕೆ ಹಾಗೂ ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತ ಡಾ.ರಾಜ್ ಅವರ ಆದರ್ಶಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಲಿ ಎಂದು ಹಾರೈಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಮಾತನಾಡಿ, ಕನ್ನಡ ಚಿತ್ರರಂಗದ ಧ್ರುವತಾರೆ ಡಾ. ರಾಜಕುಮಾರ್ ಅವರು ಕೇವಲ ಒಬ್ಬ ನಟರಾಗಿರಲಿಲ್ಲ, ಅವರು ಇಡೀ ಕರ್ನಾಟಕದ ಮನೆಮನ ಬೆಳಗಿದ ಸಂಸ್ಕೃತಿಯ ಪ್ರತೀಕವಾಗಿದ್ದರು. ಅಣ್ಣಾವ್ರಿಗೂ ಬಳ್ಳಾರಿಗೂ ಅವಿನಾಭಾವ ಸಂಬಂಧ ಹೊಂದಿದ್ದರು ಎಂದು ಹೇಳಿದರು.

ಸಾಮಾನ್ಯವಾಗಿ ಯಾವುದೇ ರಂಗದಲ್ಲಿ ಯಶಸ್ಸು ಸಿಕ್ಕ ತಕ್ಷಣ ಜನರು ರಾಜಕೀಯಕ್ಕೆ ಬರಲು ಬಯಸುತ್ತಾರೆ. ಆದರೆ ಅಣ್ಣಾವ್ರು ತಮಗೆ ಮುಖ್ಯಮಂತ್ರಿಯಾಗುವ ಅತಿ ದೊಡ್ಡ ಅವಕಾಶಗಳಿದ್ದರೂ, ನಾನು ಇಡೀ ಕನ್ನಡ ನಾಡಿನ ಮಗನಾಗಿ ಇರಲು ಬಯಸುತ್ತೇನೆ ಎಂದು ರಾಜಕೀಯವನ್ನು ನಯವಾಗಿ ತಿರಸ್ಕರಿಸಿದ್ದರು ಎಂದು ತಿಳಿಸಿದರು.

ಎಷ್ಟೇ ದೊಡ್ಡ ಹೆಸರು ಮತ್ತು ಯಶಸ್ಸು ಗಳಿಸಿದರೂ ಇತರರಿಗೆ ಗೌರವ ನೀಡುವುದು ಮತ್ತು ಸಜ್ಜನಿಕೆಯಿಂದ ವರ್ತಿಸುವುದನ್ನು

ಅಣ್ಣಾವ್ರಿಂದ ಕಲಿಯ ಬೇಕು. ಇಂದಿಗೂ ಸಿನಿಮಾ ರಂಗದಲ್ಲಿ ಯಾರಾದರೂ ಅಹಂಕಾರದಿಅದ ವರ್ತಿಸಿದರೆ, ಜನರು ತಕ್ಷಣವೇ ಅಣ್ಣಾವ್ರ ಸರಳತೆಯನ್ನು ಉದಾಹರಿಸುತ್ತಾರೆ. ಅವರ ಪ್ರಭಾವ ಅಷ್ಟು ಆಳವಾಗಿದೆ ಎಂದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಮಾತನಾಡಿ, ಡಾ.ರಾಜ್ ಕುಮಾರ್ ಅವರು ಕೇವಲ ನಟರಲ್ಲ, ಅವರು ಕನ್ನಡ ಸಂಸ್ಕೃತಿಯ ರಾಯಭಾರಿ. ಅವರ ಬಂಗಾರದ ಮನುಷ್ಯ', ಗುರಿ' ನಂತಹ ಚಿತ್ರಗಳು ಇಂದಿಗೂ ಸಮಾಜಕ್ಕೆ ಮಾದರಿಯಾಗಿವೆ ಎಂದು ಸ್ಮರಿಸಿದರು.

ಡಾ. ರಾಜ್ ಹಾಡುಗಳ ಸಾಹಿತ್ಯದಲ್ಲಿರುವ ಜೀವನ ಮೌಲ್ಯಗಳು ಆಳವಾಗಿ ಬೇರೂರಿವೆ. ಆಡಿಸಿ ನೋಡು ಬೀಳಿಸಿ ನೋಡು. ನಂತಹ ಹಾಡುಗಳು ಇಂದಿಗೂ ಜೀವನಕ್ಕೆ ಸ್ಫೂರ್ತಿಯಾಗಿವೆ. ಡಾ. ರಾಜ್‌ಕುಮಾರ್ ಅವರಿಗೆ ಅವರೇ ಸಾಟಿ. ಅವರ ಕೊಡುಗೆ ನಾಡು, ನುಡಿ ಮತ್ತು ಕಲೆಗೆ ಅನನ್ಯವಾದುದು. ಅವರ ಜನ್ಮದಿನವನ್ನು ಆಚರಿಸುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ ಗುರುರಾಜ್, ಪ್ರದಸ ನವೀನ್ ಕುಮಾರ್ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು, ಡಾ.ರಾಜ್ ಕುಮಾರ್ ಅಭಿಮಾನಿಗಳು, ಸಾರ್ವಜನಿಕರು ಹಾಗೂ ಮತ್ತಿತರರು ಇದ್ದರು.

# ಕನಕಗಿರಿ ಉತ್ಸವ-2026: ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಕಲಾ ತಂಡ-ಕಲಾವಿದರ ಆಯ್ಕೆಗಾಗಿ ಅರ್ಜಿ ಆಹ್ವಾನ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,** ಕನಕಗಿರಿ ಉತ್ಸವ-2026ರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಕಲಾ ತಂಡ-ಕಲಾವಿದರ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕನಕಗಿರಿ ಉತ್ಸವವನ್ನು ಮೇ 16 ಮತ್ತು 17 ರಂದು ಜಿಲ್ಲಾಡಳಿತದ ವತಿಯಿಂದ ಅತ್ಯಂತ ವಿಜೃಂಭಣೆಯಿಅದ ಹಾಗೂ ವಿಶಿಷ್ಟವಾಗಿ ಆಚರಿಸಲು ತೀರ್ಮಾನಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಕನಕಗಿರಿ ಉತ್ಸವ ಕಾರ್ಯಕ್ರಮಕ್ಕೆ ಅತ್ಯುತ್ತಮ, ಆಕರ್ಷಕ ವೇಷ-ಭೂಷಣ ಹಾಗೂ ವಾದ್ಯಪರಿಕರಗಳನ್ನು ಒಳಗೊಂಡಿರುವ ಜಿಲ್ಲೆಯ ಸ್ಥಳೀಯ ಕಲಾವಿದರು ಹಾಗೂ ಹೊರ ಜಿಲ್ಲೆಯ ಕಲಾವಿದರು ಸಾಂಸ್ಕೃತಿಕ ವೇದಿಕೆ ಕಾರ್ಯಕ್ರಮಕ್ಕೆ ಮತ್ತು ಮೆರವಣಿಗೆ (ಜನಪದ ಪ್ರದರ್ಶಕ) ಕಾರ್ಯಕ್ರಮದಲ್ಲಿ ಭಾಗವಹಿಸಲು ಅರ್ಜಿಯನ್ನು ಸಲ್ಲಿಸಬಹುದಾಗಿದೆ.


ಸ್ವೀಕಾರಗೊಂಡ ಅರ್ಜಿಗಳನ್ನು ಉತ್ಸವದ ಸಾಂಸ್ಕೃತಿಕ ಹಾಗೂ ಮೆರವಣಿಗೆ ಸಮಿತಿಗಳಿಂದ ಪರಿಶೀಲನೆಗೋಳಪಡಿಸಿದ ನಂತರ ಉತ್ತಮ ಕಲಾ ತಂಡಗಳನ್ನು ಮತ್ತು ಕಲಾವಿದರನ್ನು ಆಯ್ಕೆ ಮಾಡಲಾಗುವ ನಿಬಂಧನೆಗೆ ಸಮಿತಿಯು ಒಳಪಟ್ಟಿರುತ್ತದೆ ಎಂಬುದನ್ನು ಕಲಾವಿದರ ಮತ್ತು ಕಲಾತಂಡಗಳ ಆದ್ಯಮಾಹಿತಿಗಾಗಿ ಈ ಮೂಲಕ ತಿಳಿಸಲಾಗಿದೆ.

ಅರ್ಜಿಯನ್ನು ಸದಸ್ಯ ಕಾರ್ಯದರ್ಶಿಗಳು, ಸಾಂಸ್ಕೃತಿಕ ಸಮಿತಿ ಹಾಗೂ ಮೆರವಣಿಗೆ ಸಮಿತಿ ಕನಕಗಿರಿ ಉತ್ಸವ-2026 ಹಾಗೂ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಭವನದ 1ನೇ ಮಹಡಿ ಕೊಪ್ಪಳ-583231 ರವರಿಗೆ ಮೇ 2ರ ಸಂಜೆ 4 ಗಂಟೆಯೊಳಗಡೆ ಆಸಕ್ತ ಕಲಾವಿದರು, ಕಲಾತಂಡಗಳು ತಮ್ಮ ಸ್ವವಿವರದೊಂದಿಗೆ ಛಾಯಾಚಿತ್ರ ಮತ್ತು ದಾಖಲೆಗಳ ಸಮೇತ ಅರ್ಜಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಮಾತ್ಮನಿಂದ ಗಂಗೆಯನ್ನು ಭೂಲೋಕಕ್ಕೆ ತಂದ ಮಹರ್ಷಿ ಭಗೀರಥ - ಶಿವರಾಜ

ಕನ್ನಡ ಮಾತೃ ಭೂಮಿ ವಾರ್ತೆ

**ದೇವದುರ್ಗ,** ತಾಲೂಕ ಆಡಳಿತದಿಂದ ಮಿನಿವಿಧಾ ನಸೌಧ ಸಭಾಂಗಣದಲ್ಲಿ ರಾಜಶ್ರೀ ಮಹರ್ಷಿ ಭಗೀರಥ ಜಯಂತಿಯನ್ನು ಆಚರಿಸಲಾಯಿತು ಕವಿತಾ ದೇಸಾಯಿ ರಾಜಶ್ರೀ ಮಹರ್ಷಿ ಭಗೀರಥ ಭಾವಚಿ ತ್ರಕ್ಕೆ ಮಾಲಾರ್ಪಣೆ ಮಾಡಿ ಪುಷ್ಪ ನಮ ನದೊಂದಿಗೆ ಪೂಜೆ ಸಲ್ಲಿಸಿದರು ಸರಳ ವಾಗಿ ನಡೆದ ಈ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಮಾತನಾಡಿದ ದೇವದುರ್ಗ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್. ಶಿವರಾಜ್ ಮಾತನಾಡಿ ಶ್ರೀ ಮಹರ್ಷಿ ಭಗೀರಥರು ತಮ್ಮ ಅಮೋಘ ತಪಸ್ಸಿನಿಂದ ಪರಮಾತ್ಮನ ಪ್ರೀತಿಗೆ ಪಾತ್ರರಾಗಿ ಭೂಲೋಕದಲ್ಲಿ ನೀರಿನ ಬಾವಣೆಯನ್ನು ನೀಗಿಸುವುದಕ್ಕೆ ಪರಮಾತ್ಮನಿಂದ ವರ ಪಡೆದುಕೊಂಡು ಗಂಗೆಯನ್ನು ಭೂಲೋಕಕ್ಕೆ ತಂದ ಕೀರ್ತಿಯು ಶ್ರೀ ಮಹರ್ಷಿ ಭಗೀರಥರಿಗೆ ಸಲ್ಲುತ್ತದೆ ಭಗೀರಥರು ಪ್ರಾಮಾಣಿಕತೆ ನಿಷ್ಠೆ ಆಧ್ಯಾತ್ಮಿಕ ಬದುಕು ಮಾನವೀಯ ಮೌಲ್ಯಗಳು ಸನ್ಮಾರ್ಗದಲ್ಲಿ ನಡೆಯೋದಕ್ಕೆ ಅವರ ಆಚಾರ ವಿಚಾರಗಳು ಮನುಕುಲದ ಪ್ರಾಪಂಚಿಕ ಬದುಕಿಗೆ ದಾರಿದೀಪವಾಗಿದ್ದು ಪ್ರತಿಯೊಬ್ಬರೂ ಸಾಧನೆ ಹಾದಿಯಲ್ಲಿ ಭಗಿರಥರು ಗಂಗೆಯನ್ನು ಪಡೆದ ರೀತಿಯಲ್ಲಿ ನಾವುಗಳು ಕೂಡ ಆರ್ಥಿಕ ಸಾಮಾಜಿಕ ರಾಜಕೀಯ ವಿವಿಧ ಕ್ಷೇತ್ರದಲ್ಲಿ ಉನ್ನತವಾದ ಸ್ಥಾನಮಾನವನ್ನು ಪಡೆಯಬೇಕಾದರೆ ಉನ್ನತ ವ್ಯಕ್ತಿತ್ವವನ್ನು ಅಲಂಕರಿಸಬೇಕಾದರೆ ಶ್ರೀ ಭಗೀರಥ ಪ್ರಯತ್ನವು ಮಾದರಿಯಾಗಿಟ್ಟುಕೊಳ್ಳಬೇಕು ಭಗಿರಥ ಸಮಾಜವು ಕಾಯಕ ಸಮಾಜ ವಾಗಿದ್ದು ಉಪ್ಪಿಗಿಂತ ರುಚಿಯಿಲ್ಲ ತಾಯಿಗಿಂತ ಬಂಧುವಿಲ್ಲ ಉಪ್ಪನ್ನು ಉತ್ಪಾದಿಸಿ ಇಡೀ ಜಗತ್ತಿಗೆ ನೀಡಿದ ಈ ಸಮಾಜ ಸೇವೆವು ಯಾವತ್ತು ನಾವು ಮರೆಯುಕೂಡದು ಎಂದು ಈ ಸಂದರ್ಭದಲ್ಲಿ ಅಭಿಪ್ರಾಯ ಪಟ್ಟರು ಉಪ್ಪಾರ್ ಭಗೀರಥ ಸಮಾಜದ ಅಧ್ಯಕ್ಷರಾದ ಭೀಮಣ್ಣ ಬುದ್ದಿನ್ನಿ, ವೆಂಕಟೇಶ್ ಪೂಜಾರಿ ಕಾರ್ಯದರ್ಶಿ ಮೌನೇಶ್ ಬೂದೂರ್ ನಾಗಪ್ಪ ಉಪ್ಪಾರ ಮಾಜಿ ಅಧ್ಯಕ್ಷರು ಪುರಸಭೆ ದೇವದುರ್ಗಕೆ ರಂಗಪ್ಪ ವೆಂಕೋಬ ಪೂಜಾರಿ ಜಾಲಹಳ್ಳಿ ಆರ್ ವಿ ಭಗೀರಥ ಶಿವಪುತ್ರ ಉಪ್ಪಾರ್ ರಂಗಯ್ಯ ರಂಗಪ್ಪ ಮುದುಕಪ್ಪ ತಿಮ್ಮರೆಡ್ಡಿ ಪೂಜಾರಿ, ಶಿವಪುತ್ರ ಉಪ್ಪಾರ ಹಾಗೂ ಕಾರ್ಯಾಲಯದ ಸಿಬ್ಬಂದಿ ವರ್ಗವಾದ ಪ್ರವೀಣ್ ಕುಮಾರ್ ಚಾರ್ಯ ಅಭಿ ಷೇಕ್ ದೀಪ, ಲಕ್ಷ್ಮಿ, ಪಾರ್ವತಿ, , ವಿಜಯಲಕ್ಷ್ಮಿ, ನಿರ್ಮಲ ಪದ್ಮಾವತಿ ಸೇರಿ ದಂತೆ ಇತರರು ಉಪಸ್ಥಿತರಿದ್ದು ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.



# ಏ.27ರಿಂದ ಮೇ 4 ರವರೆಗೆ ಡಿಇಎಲ್‌ಇಡಿ ಪರೀಕ್ಷೆ : ನಿಷೇಧಾಜ್ಞೆ ಜಾರಿ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ,** ಡಿ.ಇಎಲ್.ಇಡಿ ಪರೀಕ್ಷೆಗಳು ಏ.27 ರಿಂದ ಮೇ 4 ರವರೆಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಪರೀಕ್ಷಾ ಕೇಂದ್ರದಲ್ಲಿ ನಡೆಯಲಿದ್ದು, ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ಡಿ.ಇಎಲ್.ಇಡಿ ಪರೀಕ್ಷೆಗಳು ಏ. 27 ರಿಂದ ಮೇ 4ರ ವರೆಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮುನಿರಾಬಾದ್ ಗ್ರಾಮದಲ್ಲಿರುವ ಕೊಪ್ಪಳ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಪಿ.ಎಸ್.ಟಿ.ಇ ವಿಭಾಗದಲ್ಲಿ ಜರುಗಲಿದ್ದು, ಪರೀಕ್ಷಾ ಕೇಂದ್ರದಲ್ಲಿ ಯಾವುದೇ ರೀತಿಯ ಅಕ್ರಮ, ಅವ್ಯವಹಾರ ನಡೆಯದಂತೆ ತಡೆಗಟ್ಟಲು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಅನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಅಂತರದ ಪ್ರದೇಶದಲ್ಲಿ ವಿವಿಧ ಷರತ್ತಿಗೆ ಒಳಪಟ್ಟು ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ನಿಷೇಧಿತ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್ ಪೇಜರ್, ಝುರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆಯಲ್ಲಿ ಪ್ರವೇಶ ಪತ್ರ ಹೊಂದಿದ ಅಭ್ಯರ್ಥಿಗಳು ಹಾಗೂ ನಿಯೋಜಿತ ಶಿಕ್ಷಕರನ್ನು,

ಜಾಗೃತ ದಳದವರನ್ನು ಹೊರತುಪಡಿಸಿ ಇನ್ನೂಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವದಿಲ್ಲ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ

# ಪ್ರತಿಯೊಬ್ಬರು ಜವಾಬ್ದಾರಿ ಅರಿತು ಕೆಲಸ ಮಾಡಿ - ರಾಜಶೇಖರ್

ಕನ್ನಡ ಮಾತೃ ಭೂಮಿ ವಾರ್ತೆ

**ಕನಕಗಿರಿ,** ಗ್ರಾಮೀಣ ಮಟ್ಟದಲ್ಲಿ ಅಧಿಕಾರ ವಿಕೇಂದ್ರೀಕರಣ, ಪಂಚಾಯತ್ ರಾಜ್ಯ 1992ರ ಸಂವಿಧಾನ ತಿದ್ದುಪಡಿಯು (73ನೇ ತಿದ್ದುಪಡಿ) 1993ರ ಏಪ್ರಿಲ್ 24ರಂದು ಜಾರಿಗೆ ಬಂದವು. ಹೀಗಾಗಿ ಪಂಚಾಯತ್ ರಾಜ್ ಸಚಿವಾಲಯವು ಪ್ರತಿವರ್ಷ ಏ. 24ರಂದು ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನಾಗಿ ಆಚ ರಿಸಲಾಗುತ್ತಿದೆ ಎಂದು ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಕೆ.ರಾಜಶೇಖರ್ ಹೇಳಿದರು.



ಅವರು, ತಾ.ಪಂ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪಂಚಾಯತ್ ರಾಜ್ ಇಲಾಖೆ ಕೆಲಸವು ಸಾರ್ವಜನಿಕ ಸೇವೆ ಸಲ್ಲಿಸಲು ಉತ್ತಮ ವೇದಿಕೆಯಾಗಿದ್ದು, ಎಲ್ಲರೂ ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ನಂತರ ವಿವಿಧ ವಿಷಯಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿದರು. ಬೇಸಿಗೆ ಹಿನ್ನೆಲೆ ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಕ್ರಮವಹಿಸಲು ಸಿಬ್ಬಂದಿಗಳಿಗೆ ಸೂಚಿಸಿದರು.

ಅಲ್ಲದೇ, ಪಿಡಿಓ, ಕಾರ್ಯ ದರ್ಶಿ, ಡಿಇಓ, ಕರವಸೂಲಿಗಾರರು, ವಾಟರ್ ಮ್ಯಾನ್‌ಗಳು ತಮ್ಮ ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು ಎಂದರು.

ಬಳಿಕ ಕೇಕ್ ಕತ್ತರಿಸಿ ಸಿಹಿಹಂಚಿ, ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಪಿಡಿಓ, ಕಾರ್ಯದರ್ಶಿ, ಬಿಲ್ ಕಲೆಕ್ಟರ್, ವಾಟರ್ ಮ್ಯಾನ್ ಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ವಿಶ್ವನಾಥ ಮುರುಡಿ, ತಾ.ಪಂ. ಸಿಬ್ಬಂದಿ, ಪಿಡಿಓರವರು, ಕಾರ್ಯದರ್ಶಿಗಳು, ಡಿಇಓ, ಕರವಸೂಲಿಗಾರರು, ನೀರು ಗಂಟಿಗಳು, ಸೇರಿದಂತೆ ಹಲವರು ಹಾಜರಿದ್ದರು.

# ಬಳ್ಳಾರಿ ಜಿಲ್ಲೆಯ ರೂ. 14,248 ಕೋಟಿಗಳ ವಾರ್ಷಿಕ ಸಾಲ ಯೋಜನೆ ಬಿಡುಗಡೆ

ಕನ್ನಡ ಮಾತೃ ಭೂಮಿ ವಾರ್ತೆ



**ಬಳ್ಳಾರಿ,** ಜಿಲ್ಲೆಯ ಆರ್ಥಿಕ ಪ್ರಗತಿಗೆ ಪೂರ ಕವಾಗಿರುವ 2026-27ನೇ ಹಣಕಾಸು ವರ್ಷದ ಜಿಲ್ಲಾ ಕ್ರೆಡಿಟ್ ಯೋಜನೆ ಯನ್ನು ಲೀಡ್ ಬ್ಯಾಂಕ್ ಆದ ಕೆನರಾ ಬ್ಯಾಂಕ್ ವತಿಯಿಂದ ಶುಕ್ರವಾರ ಬಿಡು ಗಡೆ ಮಾಡಲಾಯಿತು.

ನಗರದ ನೂತನ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಈ ಸಾಲಿನ ಸಾಲ ಯೋಜನೆಯ ಕೈಪಿಡಿಯನ್ನು ಲೋಕಾರ್ಪಣೆಗೊಳಿಸಿದರು.

**ಸಾಲ ಯೋಜನೆಯ ಮುಖ್ಯಾಂಶಗಳು (2026-27):**

ಈ ಬಾರಿಯ ಸಾಲ ಯೋಜನೆಯು ಕಳೆದ ವರ್ಷಕ್ಕಿಂತ ಶೇ.16.19 ರಷ್ಟು ಹೆಚ್ಚಳ ಕಂಡಿದ್ದು, ಒಟ್ಟು ರೂ.14,248.71 ಕೋಟಿಗಳ ಗುರಿಯನ್ನು ಹೊಂದಿದೆ.

**ಕೃಷಿ ವಲಯ:** ಒಟ್ಟು ಯೋಜ ನೆಯ ಶೇ. 43.74 ರಷ್ಟು ಅಂದರೆ ರೂ. 6,231.71 ಕೋಟಿ ಅನುದಾನವನ್ನು ಕೃಷಿ ಕ್ಷೇತ್ರಕ್ಕೆ ಮೀಸಲಿಡಲಾಗಿದೆ.

**ಎಂ.ಎಸ್.ಎಅ.ಇ:** ಜಿಲ್ಲೆಯ ಕೈಗಾರಿಕಾ ಚಟುವಟಿಕೆಗಳ ಉತ್ತೇಜನಕ್ಕಾಗಿ ರೂ. 3,630.09 ಕೋಟಿ ನಿಗದಿಪಡಿಸಲಾಗಿದೆ.

**ಆದ್ಯತಾ ವಲಯ:** ಒಟ್ಟು ಯೋಜನೆಯ ಶೇ. 70.96 ರಷ್ಟು ಭಾಗವನ್ನು (ರೂ. 10,111.45 ಕೋಟಿ) ಆದ್ಯತಾ ವಲಯಕ್ಕೆ ನೀಡಲಾಗಿದೆ.

**ಇತರೆ:** ಶಿಕ್ಷಣ ವಲಯಕ್ಕೆ ರೂ. 44.56 ಕೋಟಿ ಹಾಗೂ ವಸತಿ ವಲಯಕ್ಕೆ ರೂ. 173.13 ಕೋಟಿಗಳನ್ನು ಹಂಚಿಕೆ ಮಾಡಲಾಗಿದೆ.

**ಕಳೆದ ಸಾಲಿನ ಸಾಧನೆ (2025-26):**

ಬ್ಯಾಂಕಿಂಗ್ ಪ್ರಗತಿ: ಜಿಲ್ಲೆಯ ಬ್ಯಾಂಕಿಅಗ್ ವಲಯದ ಒಟ್ಟು ಠೇವಣಿ ರೂ. 21,858.21 ಕೋಟಿಗಳಾಗಿದ್ದು (ಶೇ. 16.26 ಪ್ರಗತಿ), ಒಟ್ಟು ಮುಂಗಡಗಳು ರೂ. 19,312.87 ಕೋಟಿಗಳಾಗಿವೆ. ಜಿಲ್ಲೆಯ ಸಾಲ-ಠೇವಣಿ ಅನುಪಾತವು ಶೇ. 88.36 ರಷ್ಟಿದೆ. ಕಳೆದ ಸಾಲಿನಲ್ಲಿ ರೂ. 12,263.03 ಕೋಟಿ ಸಾಲ ವಿತರಣೆಯ ಗುರಿಯ ವಿರುದ್ಧ ಬ್ಯಾಂಕುಗಳು ರೂ. 13,138.78 ಕೋಟಿ ವಿತರಿಸಿ, ಶೇ. 107.14 ರಷ್ಟು ಅತ್ಯುತ್ತಮ ಸಾಧನೆ ದಾಖಲಿಸಿವೆ ಎಂದು ಕೆನರಾ ಬ್ಯಾಂಕ್‌ನ ಎಲ್‌ಡಿಎಂ ಗಿರೀಶ್ ವಿ ಕುಲಕರ್ಣಿ ಅವರು ಕಳೆದ ವರ್ಷದ ಸಾಧನೆಯ ಅಂಕಿ-ಅಂಶಗಳನ್ನು ಈ ವೇಳೆ ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಪ್ರಾಯೋಜಿತ ಯೋಜನೆಗಳ ಪ್ರಗತಿ ಪರಿಶೀಲಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು, ಪಿಎಂಎಫ್‌ಎಅಇ, ಪಿಎಂಇಜಿಪಿ ಹಾಗೂ ಪಿಎಂ ಸ್ವಾನಿಧಿಯಂತಹ ಯೋಜನೆಗಳ ಸಮರ್ಪಕ ಅನುಷ್ಠಾನವಾಗಬೇಕು. ಬ್ಯಾಂಕರ್‌ಗಳು ಮತ್ತು ಸರ್ಕಾರಿ ಇಲಾಖೆಗಳ ನಡುವೆ ಉತ್ತಮ ಸಮನ್ವಯವಿದ್ದರೆ ಈ ವರ್ಷವೂ ಹೆಚ್ಚಿನ ಸಾಧನೆ ಮಾಡಲು ಸಾಧ್ಯ ಎಂದು ಆಶಿಸಿದರು.

ಜಿಪಂ ಸಿಇಓ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸಣ್ಣ ಸಾಲಗಳಿಗೆ ಮತ್ತು ಸರ್ಕಾರಿ ಯೋಜನೆಗಳಿಗೆ ಮೇಲಾಧಾರ ಭದ್ರತೆ ಕೇಳದಂತೆ ಬ್ಯಾಂಕರ್‌ಗಳಿಗೆ ಸೂಚಿಸಿದ ಅವರು, ಸಕಾಲಿಕ ಸಾಲ ಹರಿವು ಜಿಲ್ಲೆಯ ನಿರುದ್ಯೋಗ ನಿರ್ಮೂಲನೆಗೆ ಸಹಕಾರಿ ಎಂದರು.

ಈ ವೇಳೆ ಕೆನರಾ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಅರುಣ್ ಕುಮಾರ್ ಎಜಿ, ವಿಭಾಗೀಯ ವ್ಯವಸ್ಥಾಪಕ ಉಪೇಂದ್ರ ಸಿಂಗ್, ಯೂನಿಯನ್ ಬ್ಯಾಂಕ್‌ನ ಜಿ. ರಾಜೇಶ್, ಕೆಜಿಬಿ ಹಿರಿಯ ವ್ಯವಸ್ಥಾಪಕ ಚಂದ್ರಪ್ಪ, ಎಸ್‌ಬಿಐ ಮುಖ್ಯ ವ್ಯವಸ್ಥಾಪಕ ನಾಗರಾಜು, ಐಓ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ಮಹಾಂತೇಶ್.ಟಿ., ಹೆಚ್‌ಡಿಎಫ್‌ಸಿ ಬ್ಯಾಂಕ್ ಮುಖ್ಯಸ್ಥ ರಮೇಶ್ ಜೋನಾಲ್, ಕ್ಲಸ್ಟರ್ ಮುಖ್ಯಸ್ಥ ನಂದ ಕಿಶೋರ್, ಬಿಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಾಸೀರ್ ಅಹಮದ್, ಆರ್‌ಎಸ್‌ಇಟಿಐ ಸಿಬಿ ನಿರ್ದೇಶಕ ರಾಜಸಾಬ್ ಸೇರಿದಂತೆ ವಿವಿಧ ಬ್ಯಾಂಕ್‌ಗಳ ಜಿಲ್ಲಾ ಸಂಯೋಜಕರು ಮತ್ತು ಲೈನ್ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಜ್ಞಾನ ವಿಭಾಗದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದ ಸ್ಫೂರ್ತಿ ಪಿಯು ಕಾಲೇಜು

ಕನ್ನಡ ಮಾತೃ ಭೂಮಿ ವಾರ್ತೆ

**ಅಫಜಲಪುರ,** ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ತಾಲೂಕಿನ ಸ್ಫೂರ್ತಿ ಶಿಕ್ಷಣ ಸಂಸ್ಥೆಯ ಮಕ್ಕಳು ವಿಜ್ಞಾನ ವಿಭಾ ಗದಲ್ಲಿ ಅತಿಹಳೆಯ ಅಂಕಗಳನ್ನು ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಪಡೆದು ತಮ್ಮ ಕಾಲೇಜಿನ ಕೀರ್ತಿ ಹೆಚ್ಚಿಸಿ ದ್ದಾರೆ. ಕು.ಸುಹಾನಿ ರಜಪೂತ 95%,ಕುಸಂಗೀತ ಮಾಶಾಳ 93%,ಕು.ಉಮಾಸಲ್ಮಾ ಚೌದ್ರಿ 92.33%,ಕು.ಪೂಜಾ ಶಾಬಾದಿ 92% ಪ್ರತಿಶತ ಅಂಕಗಳನ್ನು ಪಡೆದು ತಾಲೂಕಿನ ಕೀರ್ತಿ ಹೆಚ್ಚಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡ ಸಂಸ್ಥೆಯ ಮುಖ್ಯಸ್ಥರಾದ ಜಿ.ಎಸ್.ಬಾಳಿಕಾಯಿ ಪ್ರತಿವರ್ಷವೂ ನಮ್ಮ ಕಾಲೇಜಿನ ಮಕ್ಕಳು ದ್ವಿತಿಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಉತ್ತಮ ಅಂಕಗಳನ್ನು ಪಡೆದು ತಾಲೂಕಿನ ಕೀರ್ತಿ ಹೆಚ್ಚಿಸುವಲ್ಲಿ ಪ್ರಧಾನ ಪಾತ್ರ ವಹಿಸುತ್ತಿದ್ದಾರೆ.ಶಿಕ್ಷಣ ನೀಡುವ ವಿಷಯದಲ್ಲಿ ಕಾಲೇಜಿನ ಉಲನ್ಯಾಸಕರ ಬಳಗ ಯಾವುದರಲ್ಲಿಯೂ ಕಾಂಪ್ರಾಮೈಸ್ ಆಗೋದಿಲ್ಲ.ಅದಲ್ಲದೇ ಪ್ರತಿನಿತ್ಯ ತರಗತಿಗಳು ಕಟ್ಟುನಿಟ್ಟಾಗಿ ಪಾಠ ಮಾಡುವ ಮುಖಾಂತರ ಉತ್ತಮ ಫಲಿತಾಂಶಕ್ಕೆ ಕಾರಣವಾಗಿದೆ.ಈ ಬಾರಿ ನಮ್ಮ ಕಾಲೇಜಿನ ವತಿಯಿಂದ ರೈತರ ಮಕ್ಕಳಿಗೆ ಸೈನಿಕರ ಮಕ್ಕಳಿಗೆ,ಆಶಾ ಕಾರ್ಯಕರ್ತೆಯರ ಮಕ್ಕಳಿಗೆ ಹಾಗೂ ಬಸ್ ಚಾಲಕ ನಿರ್ವಾಹಕರ ಮಕ್ಕಳಿಗೆ 30% ರಿಯಾಯಿತಿ ದರದಲ್ಲಿ ಪ್ರವೇಶಾತಿ ನೀಡಲಾಗುವುದು ಎಂದರು.ತಾಲೂಕಿನ ಮಕ್ಕಳ ಉತ್ತಮ ಭವಿಷ್ಯದ ದೃಷ್ಟಿಯಿಂದ ಸ್ಫೂರ್ತಿ ಶಿಕ್ಷಣ ಸಂಸ್ಥೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದರು.

ನಂತರ ಮಾತನಾಡಿದ ವಿಜ್ಞಾನ ವಿಭಾಗದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದ ಕು.ಸುಹಾನಿ ರಜಪೂತ ನನ್ನ ಸತತ ಪ್ರಯತ್ನಕ್ಕೆ ಸಿಕ್ಕ ಪ್ರತಿಫಲ ಇದಾಗಿದೆ.

ಅದಲ್ಲದೇ ವಿಶೇಷವಾಗಿ ನನ್ನ ಕಾಲೇಜಿನ ಉಪನ್ಯಾಸಕರು ಸರಿಯಾದ ಭೋಧನೆ ಮಾಡಿರುವುದಕ್ಕೆ ಈ ಫಲಿತಾಂಶ ಬರಲು ಕಾರಣವಾಯಿತು. ಸ್ಫೂರ್ತಿ ಕಾಲೇಜಿನಲ್ಲಿ ವಿದ್ಯಾಬ್ಯಾಸಕ್ಕೆ ಬೇಕಾಗುವ ಎಲ್ಲಾ ರೀತಿಯ ಪೂರಕ ಸೌಲಭ್ಯಗಳು ಇರುವುದರಿಂದ ಉತ್ತಮ ರೀತಿಯ ಫಲಿತಾಂಶ ಪಡೆಯಬಹುದು.ನನ್ನ ಕಾಲೇಜಿನ ಉಪ ನ್ಯಾಸಕರು ಹಾಗೂ ನನ್ನ ತಂದೆ-ತಾಯಿಯರ ಸಹಕಾರದಿಂದ ಈ ಫಲಿತಾಂಶ ಬರಲು ಕಾರಣವಾಯಿತು ಎಂದರು.

ಇದೆ ಸಂದರ್ಭದಲ್ಲಿ ಸ್ಫೂರ್ತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಜಿ.ಎಸ್.ಬಾಳಿಕಾಯಿ,ಕಾರ್ಯದರ್ಶಿ ಸುಜಾತಾ ಬಾಳಿಕಾಯಿ,ಪ್ರಾಂಶುಪಾಲರಾದ ವಿಜಯಕುಮಾರ ಕಾಂಬ್ಳೆ,ಉಪನ್ಯಾಸಕರಾದ ವೆಂಕಟೇಶ ಘಾಟೆ,ಸೇರಿದಂತೆ ಕಾಲೇಜಿನ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಎಸ್‌ಟಿ ಮಹಿಳೆಯರಿಗೆ ಉಚಿತ ಫ್ಯಾಷನ್ ಡಿಸೈನಿಂಗ್ ತರಬೇತಿ; ಅರ್ಜಿ ಆಹ್ವಾನ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಸ್ವಯಂ ಉದ್ಯೋಗ ಕೈಗೊಳ್ಳಲು ಆಸಕ್ತಿ ಇರುವ ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳಿಗಾಗಿ ಹೊಸಪೇಟೆಯಲ್ಲಿ 30 ದಿನಗಳ ವಲಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ' (ಫ್ಯಾಷನ್ ಡಿಸೈನಿಂಗ್) ತರಬೇತಿ ಆಯೋಜಿಸಲಾಗಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ, ವಿಜಯನಗರದ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ, (ಸಿಡಾಕ್) ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ 30 ದಿನಗಳ ತರಬೇತಿಯಲ್ಲಿ ಫ್ಯಾಷನ್ ಡಿಸೈನಿಂಗ್ ಕುರಿತ ಪ್ರಾಯೋಗಿಕ ಮತ್ತು ಸಿದ್ಧಾಂತ ತರಗತಿಗಳ ಜೊತೆಗೆ ವಿವಿಧ ವಿಷಯಗಳ ಬಗ್ಗೆ ಪರಿಣಿತರಿಂದ ಮಾಹಿತಿ ನೀಡಲಾಗುವುದು.

ಯಶಸ್ವಿ ಉದ್ಯಮಶೀಲರ ಗುಣಲಕ್ಷಣಗಳು, ಉದ್ಯಮ ಪ್ರಾರಂಭಿಸುವ ಹಂತಗಳು ಮತ್ತು ಯೋಜನಾ ವರದಿ ತಯಾರಿಕೆ, ಸರ್ಕಾರದ ವಿವಿಧ ಸ್ವಯಂ ಉದ್ಯೋಗ ಯೋಜನೆಗಳು, ಬ್ಯಾಂಕ್ ವ್ಯವಹಾರಗಳು, ಸಾಲ ಸೌಲಭ್ಯ ಮತ್ತು ಹಣಕಾಸು ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ ಹಾಗೂ ಸಾಲಕ್ಕಾಗಿ ಅರ್ಜಿ ಸಲ್ಲಿಸುವ ವಿಧಾನ ಒಳಗೊಂಡಅತೆ ಇತರೆ.

ಅರ್ಹತೆಗಳು:

ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು. ಕನಿಷ್ಠ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು.

ಪರಿಶಿಷ್ಟ ಪಂಗ ಡದ ಮಹಿಳೆಯರಿಗೆ ಮಾತ್ರ ಅವಕಾಶ. ಆಸಕ್ತ ಅಭ್ಯರ್ಥಿಗಳು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಏ.29, 2026 ರೊಳಗೆ ಈ ಕೆಳಗಿನ ವಿಳಾಸಕ್ಕೆ ಭೇಟಿ ನೀಡಬಹುದು ಅಥವಾ ದೂರ ವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಹೊಸಪೇಟೆ ರಸ್ತೆ, ಬಳ್ಳಾರಿ-583102. ಅಥವಾ ಸಂಪರ್ಕ ಸಂಖ್ಯೆ: 9449226221, 7483538942, 9986332736 ಗೆ ಕರೆ ಮಾಡಬಹುದು ಸಿಡಾಕ್ ಸಂಸ್ಥೆಯ ಜಂಟಿ ನಿರ್ದೇಶಕ ಜಿ.ಯು. ಹುಡೇದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ...ಮೊದಲನೇ ಪುಟದಿಂದ

## ಬಿರುಗಾಳಿ, ಆಲಿಕಲ್ಲು ಸಹಿತ ಮಳೆ, ನದಿಯಲ್ಲಿ ಮುಳುಗಿ ವೃದ್ಧೆ ಸಾವು

ಹೋಗಿರುವ ವರದಿ ಕೂಡ ಆಗಿದೆ. ಜೊತೆಗೆ ಅಪಾರ ಪ್ರಮಾಣದ ಆಸ್ತಿಪಾಸ್ತಿ ಹಾನಿಯಾಗಿದೆ. ಕಾಫಿ ಬೆಳೆಗಾರರಿಗೆ ಈ ಆಲಿಕಲ್ಲು ಮಳೆ ಹೊಸ ಆತಂಕ ತಂದೊಡ್ಡಿತು. ಶೃಂಗೇರಿಯನ್ನು ಸಂಪರ್ಕಿಸುವ ರಾಜ್ಯ ಹೆದ್ದಾರಿಯಲ್ಲಿ ಬನ್ನೂರು ಗ್ರಾಮದ ಬಳಿ ಮರ ಹಾಗೂ ಏಳು ವಿದ್ಯುತ್ ಕಂಬಗಳು ನೆಲಸಮಗೊಂಡಿದ್ದವು. ಪರಿಣಾಮ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತ್ತು. ಸುಮಾರು ಅರ್ಧ ಗಂಟೆಗೂ ಅಧಿಕ ಕಾಲ ವಾಹನಗಳು ಸಾಲುಗಟ್ಟಿ ನಿಂತಿದ್ದವು. ವಿದ್ಯುತ್ ಕಂಬಗಳು ಮುರಿದಿರುವುದರಿಂದ ಈ ಭಾಗದಲ್ಲಿಯೂ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಸ್ಥಳೀಯರು ಮತ್ತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಯಂತ್ರಗಳ ಮೂಲಕ ಮರ ತೆರವುಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ನದಿಯಲ್ಲಿ ಮುಳುಗಿ ವೃದ್ಧೆ ಸಾವು: ಸೊಪ್ಪು ತರಲು ಹೋದ ವೃದ್ಧೆಯೊಬ್ಬರು ಆಕಸ್ಮಿಕವಾಗಿ ನದಿಗೆ ಬಿದ್ದು ಮೃತಪಟ್ಟ ದಾರುಣ ಘಟನೆ ಮೂಡಿಗೆರೆ ತಾಲೂಕಿನ ಕಡಿದಾಳು ಗ್ರಾಮದಲ್ಲಿ ಶುಕ್ರವಾರ ಸಂಜೆ ನಡೆದಿದೆ. ಕಡಿದಾಳು ಗ್ರಾಮದ ನಿವಾಸಿ ಸುಬ್ಬಮ್ಮ (65) ಮೃತರು. ಕೆಸುವಿನ ಸೊಪ್ಪು ತರುವುದಾಗಿ ಮನೆಯಲ್ಲಿ ಹೇಳಿ ಹೋಗಿದ್ದರು. ಸಂಜೆಯಾದರೂ ಅವರು ಮನೆಗೆ ಮರಳದಿದ್ದಾಗ ಆತಂಕಗೊಂಡ ಕುಟುಂಬಸ್ಥರು ಸುತ್ತಮುತ್ತಲಿನ ಭಾಗಗಳಲ್ಲಿ ತೀವ್ರ ಹುಡುಕಾಟ ನಡೆಸಿದ್ದಾರೆ. ಕೊನೆಗೆ ಹೇಮಾವತಿ ನದಿಯಲ್ಲಿ ಸುಬ್ಬಮ್ಮ ಅವರ ಶವ ಪತ್ತೆಯಾಗಿದೆ. ನದಿ ದಂಡೆಯಲ್ಲಿ ಕೆಸದ ಸೊಪ್ಪು ಕೊಯ್ಯುವಾಗ ಆಕಸ್ಮಿಕವಾಗಿ ಕಾಲು ಜಾರಿ ನದಿಗೆ ಬಿದ್ದಿರಬಹುದೆಂದು ಶಂಕಿಸಲಾಗಿದೆ. ವಿಷಯ ತಿಳಿಯುತ್ತಿದ್ದಂತೆ ಮೂಡಿಗೆರೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಮಾಜ ಸೇವಕ ಆರೀಫ್ ಬಣಕಲ್ ಮತ್ತು ಅವರ ತಂಡದ ಸಹಕಾರದೊಂದಿಗೆ ನದಿಯಿಂದ ಶವವನ್ನು ಹೊರ ತೆಗೆಯಲಾಗಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಪಟ್ಟಣದ ಎಂ.ಜಿ.ಎಂ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಕೆಸುವಿನ ಸೊಪ್ಪು ಕೀಳಲು ಹೋದ ಸಂದರ್ಭದಲ್ಲಿ ಆಕಸ್ಮಿಕವಾಗಿ ನದಿಗೆ ಬಿದ್ದು ಕಡಿದಾಳು ಗ್ರಾಮದ ಸುಬ್ಬಮ್ಮ ಎಂಬುವರು ಮೃತಪಟ್ಟ ಮಾಹಿತಿ ಲಭ್ಯವಾಗಿದೆ. ಅವರಿಗೆ ಮೂರು ಜನ ಹೆಣ್ಣು ಮಕ್ಕಳಿದ್ದು, ಈ ಪೈಕಿ ಪುತ್ರಿಯೊಬ್ಬರು ಮೂಡಿಗೆರೆ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಮೃತದೇಹವನ್ನು ನದಿಯಿಂದ ಹೊರತೆಗೆದು ಸರ್ಕಾರಿ ಆಸ್ಪತ್ರೆ ಶವಾಗಾರಕ್ಕೆ ರವಾನಿಸಲಾಗಿದೆ. ಇಂದು ಮಧ್ಯಾಹ್ನ ಮರಣೋತ್ತರ ಪರೀಕ್ಷೆ ಮುಗಿಯಲಿದ್ದು, ಬಳಿಕ ಕುಟುಂಬ ಸದಸ್ಯರಿಗೆ ಮೃತದೇಹ ಹಸ್ತಾಂತರಿಸಲಾಗುತ್ತದೆ ಎಂದು ಮೂಡಿಗೆರೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಹೇಳಿದ್ದಾರೆ.

## ಅನರ್ಹಗೊಳಿಸುವಂತೆ ಉಪರಾಷ್ಟ್ರಪತಿಗೆ ಎಪಿಪಿ ಪತ್ರ: ಸಂಜಯ್ ಸಿಂಗ್

ಸಂಜಯ್ ಸಿಂಗ್ ಹೇಳಿದರು. ಏಳು ಸಂಸದರು ಬಿಜೆಪಿಗೆ ಸೇರುವ ಕ್ರಮವನ್ನು ಎಎಪಿ ನಾಯಕರು ಸಂಪೂರ್ಣವಾಗಿ ಕಾನೂನು ಬಾಹಿರ ಎಂದು ಕರೆದರು. ಈ ಏಳು ಸಂಸದರನ್ನು ಅನರ್ಹಗೊಳಿಸುವಂತೆ ಒತ್ತಾಯಿಸಿ ಉಪಾಧ್ಯಕ್ಷರು ಮತ್ತು ರಾಜ್ಯಸಭೆಯ ಅಧ್ಯಕ್ಷರಿಗೆ ಪತ್ರ ಬರೆಯುತ್ತಿರುವುದಾಗಿ ಅವರು ಹೇಳಿದರು. ನಿನ್ನೆ ಎಎಪಿ ರಾಜ್ಯಸಭಾ ಸಂಸದರಾದ ರಾಘವ್ ಚಡ್ಡಾ, ಸಂದೀಪ್ ಪಾಠಕ್ ಮತ್ತು ಅಶೋಕ್ ಮಿತ್ತಲ್ ಅವರು ಪಕ್ಷದ ಇತರ ನಾಲ್ವರು ಸಂಸದರೊಂದಿಗೆ ಬಿಜೆಪಿಗೆ ಸೇರುತ್ತಿರುವುದಾಗಿ ಘೋಷಿಸಿದರು. ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಚಡ್ಡಾ, ಎಎಪಿಯ 10 ರಾಜ್ಯಸಭಾ ಸಂಸದರಲ್ಲಿ ಏಳು ಮಂದಿ ಬಿಜೆಪಿಯೊಂದಿಗೆ ವಿಲೀನಗೊಳ್ಳಲು ಸಿದ್ಧರಿದ್ದಾರೆ ಎಂದು ಹೇಳಿದರು. ಎಎಪಿಯ ಈ ನಡೆ ರಾಜ್ಯಸಭೆಯಲ್ಲಿ ರಾಜಕೀಯ ಬಿಸಿಯನ್ನು ಹೆಚ್ಚಿಸುವ ನಿರೀಕ್ಷೆಯಿದೆ. ಸಂಸದರ ಈ ಕ್ರಮವು ಪಕ್ಷಾಂತರ ವಿರೋಧಿ ಕಾನೂನನ್ನು ಉಲ್ಲಂಘಿಸುತ್ತದೆ. ಅವರ ಸದಸ್ಯತ್ವವನ್ನು ರದ್ದುಗೊಳಿಸಬೇಕು ಎಂದು ಎಎಪಿ ನಂಬುತ್ತದೆ. ಈ ವಿಷಯದಲ್ಲಿ ರಾಜ್ಯಸಭಾ ಅಧ್ಯಕ್ಷರು ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬುದನ್ನು ನೋಡಬೇಕಿದೆ.

## ಜೀವಾವಧಿ ಶಿಕ್ಷೆಗೆ ತಡೆ ಕೋರಿ ವಿನಯ್ ಕುಲಕರ್ಣಿ ಹೈಕೋರ್ಟ್ ಗೆ ಮೇಲ್ಮನವಿ

ಈಗಾಗಲೇ ಸಲ್ಲಿಕೆಯಾಗಿರುವ ಅರ್ಜಿಯ ವಿಚಾರಣೆ ಮುಂದಿನ ವಾರ ನಡೆಯುವ ಸಾಧ್ಯತೆ ಇದೆ. ಈ ವಿಚಾರಣೆಯ ವೇಳೆ ಸಿಬಿಐ ವಾದವನ್ನೂ ನ್ಯಾಯಾಲಯ ಆಲಿಸುವ ನಿರೀಕ್ಷೆಯಿದೆ. ತೀರ್ಪು ಪ್ರಕಟವಾದ 90 ದಿನಗಳಲ್ಲಿ ತೀರ್ಪನ್ನು ಅಮಾನತಿನಲ್ಲಿ ಇಡದೇ ಹೋದರೆ ಶಾಸಕ ಸ್ಥಾನ ಅನರ್ಹ ಆಗುವ ಭಯದಲ್ಲಿ ವಿನಯ್ ಕುಲಕರ್ಣಿ ಮೇಲ್ಮನವಿ ಅರ್ಜಿ ಸಲ್ಲಿಸಿದ್ದಾರೆ.

**ಪ್ರಕರಣ ಹಿನ್ನೆಲೆ :** 2016ರ ಜೂನ್ ತಿಂಗಳಲ್ಲಿ ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೇಶ್ ಗೌಡ ಕೊಲೆಯಾಗಿತ್ತು. ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ ಒಟ್ಟು 21 ಮಂದಿ ಮೇಲೆ ಆರೋಪ ಕೇಳಿ ಬಂದಿತ್ತು. ಪ್ರಕರಣವನ್ನು ಬಿಜೆಪಿ ಸರ್ಕಾರ ಸಿಬಿಐಗೆ ವಹಿಸಿತ್ತು. ತನಿಖೆ ನಡೆಸಿದ್ದ ಸಿಬಿಐ ಚಾರ್ಜ್‌ಶೀಟ್ ಸಲ್ಲಿಸಿತ್ತು. ಸೋಮಶೇಖರ್ ನ್ಯಾಮಗೌಡ ಹಾಗೂ ವಾಸುದೇವ್ ನಿಲೇಕಣಿಯನ್ನ ಕೋರ್ಟ್ ಖುಲಾಸೆಗೊಳಿತ್ತು. ಇಬ್ಬರು ನಿರ್ದೋಷಿಗಳನ್ನ ಬಿಟ್ಟು ಉಳಿದವರನ್ನು ಸಿಬಿಐ ವಶಕ್ಕೆ ಪಡೆದಿತ್ತು. ಬಳಿಕ ಬೌರಿಂಗ್ ಆಸ್ಪತ್ರೆಯಲ್ಲಿ 17 ಅಪರಾಧಿಗಳ ವೈದ್ಯಕೀಯ ಪರೀಕ್ಷೆ ನಡೆಸಿ ಪರಪ್ಪನ ಅಗ್ರಹಾರಕ್ಕೆ ಶಿಫ್ಟ್ ಮಾಡಲಾಗಿತ್ತು. ಬಳಿಕ ಆದೇಶ ಪ್ರಕಟಿಸಿದ ಕೋರ್ಟ್ ಶಾಸಕ ವಿನಯ್ ಕುಲಕರ್ಣಿ ಸೇರಿ 16 ಆರೋಪಿಗಳಿಗೆ ಜೀವಾವಧಿ ಶಿಕ್ಷೆ ಪ್ರಕಟಿಸಿದ್ದು, ಇನ್‌ಸ್ಪೆಕ್ಟರ್ ಚನ್ನಕೇಶವ ಟಿಂಕರಿಕರ್‌ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

## ಸಿಬ್ಬಂದಿಗಳ ಕ್ರಮವಿರೋಧಿಸಿ ಧೀಡಿರ್ ರಸ್ತೆ ತಡೆ-ಕ್ರಮಕ್ಕೆ ಒತ್ತಾಯ

ಜನರು ಪ್ರತಿಭಟನೆಗಿಳಿದರು. ದೇವಸ್ಥಾನದ ಒಳಗಡೆ ಸಮಾಜ ಜನರ ಮಾಹಿತಿಗಾಗಿ ಹಾಕಲಾಗಿರುವ ಫ್ಲೆಕ್ಸಗಳನ್ನು ಸಿಬ್ಬಂದಿಗಳ ತೆರವುಗೊಳಿಸಿರುದನ್ನು ಖಂಡಿಸಿದ ಪ್ರತಿಭಟನಕಾರರು, ಫ್ಲೇಕ್ಸ್‌ಗಳನ್ನು ಮರು ಹಾಕಿ ಸಿಬ್ಬಂದಿಗಳ ಕ್ಷಮೆ ಕೇಳಬೇಕೆಂದು ಆಗ್ರಹಿಸಿದರು. ಪಾಲಿಕೆ ಸಿಬ್ಬಂದಿ ನರಸಿಂಹಲು ಎಂಬಾತ ಅನುಚಿತವಾಗಿ ವರ್ತಿಸಿ ದೌರ್ಜನ್ಯ ಮಾಡಿದ್ದಾನೆ. ಸ್ಯಾನಿಟರಿ ಇನ್ಸಪೆಕ್ಟರ್ ರಾಜಕುಮಾರ ಎಂಬುವರ ಸೂಚನೆ ಮೇರೆಗೆ ಫ್ಲೆಕ್ಸ್ ತೆರವುಗೊಳಿಸುತ್ತಿರುವದಾಗಿ ನರಸಿಂಹಲು ಹೇಳುತ್ತಿದ್ದಾರೆ. ಮನವಿಮಾಡಿದರೂ ಯಾರಿಗೆ ಹೇಳಿದರೂ ಸಂಬಂಧವಿಲ್ಲ ಎಂದು ಉಡಾಫೆಯಾಗಿ ಮಾತನಾಡಿ ದೇವಸ್ಥಾನ ಕಂಪೌಂಡ್ ಒಳಗೆ ಕಟ್ಟಿದ್ದ ಫ್ಲೆಕ್ಸ್ ತೆರವುಗೊಳಿಸಿರುವದು ಸಮಾಜ ಆಕ್ರೋಶಕ್ಕೆ ಕಾರಣವಾಗಿದೆ.

ಸಮಾಜ ಅಧ್ಯಕ್ಷ ಪುರೋಷೋತ್ತಮ ಸಾವಿತ್ರಿ ಮಾತನಾಡಿ, ಮಹಾನಗರ ಪಾಲಿಕೆ ಸಿಬ್ಬಂದಿಗಳು ಕನಿಷ್ಟ ಸಮಾಜ ಮುಖಂಡರೊಂದಿಗೆ ಸಹ ಚರ್ಚಿಸದೇ ಫ್ಲೆಕ್ಸ್ ತೆರವುಗೊಳಿಸಿರುವ ಹಿಂದ ದುರುದ್ದೇಶವಿದೆ. ಯಾರದೋ ಒತ್ತಡದಿಂದ ತೆರವುಗೊಳಿಸಲಾಗಿದೆ. ವಾಸವಿ ಜಯಂತಿ ಕಾರ್ಯಕ್ರಮದಲ್ಲಿ ಏಕಾಏಕಿ ತೆರವುಗೊಳಿಸಿರುವದು ಖಂಡನೀಯ. ಕಾರಣವೂ ಹೇಳದೇ ತೆರವುಗೊಳಿಸಲಾಗಿದೆ. ಇದು ಪಾಲಿಕೆ ಸಿಬ್ಬಂದಿ ದೌರ್ಜನ್ಯವಾಗಿದೆ ಎಂದು ಆರೋಪಿಸಿದರು.

ಪ್ರತಿಭಟನಾ ಸ್ಥಳಕ್ಕೆ ತೆರಳಿದ ಶಾಸಕ ಡಾ..ಶಿವರಾಜ ಪಾಟೀಲ್ ಮಾತನಾಡಿ, ಆರ್ಯವೈಶ್ಯ ಸಮಾಜದ ಅದ್ದೂರಿಯಾಗಿ ವಾಸವಿ ಜಯಂತಿ ಆಚರಿಸುತ್ತಿರುವ ಪಾಲಿಕೆಸಿಬ್ಬಂದಿಗಳು ಫ್ಲೆಕ್ಸ್ ತೆರವುಗೊಳಿಸಿ ದಾಷ್ಟ್ಯತನ ಪ್ರದರ್ಶಿಸಿದ್ದಾರೆ.ಸಮಾಜದ ಜನರಿಗೆ ಮಾಹಿತಿ ನೀಡದೇ ತೆರವುಗೊಳಿಸಿರುವ ಹಿಂದ ಯಾರ ಕೈವಾಡವಿದೆ ಎಂಬುದು ಬಹಿರಂಗವಾಗಬೇಕೆಂದರು.

ಪ್ರತಿಭಟನಾ ಸ್ಥಳಕ್ಕೆ ಪಾಲಿಕೆ ಅಧಿಕಾರಿ ಮಲ್ಲಿಕಾರ್ಜುನ, ಡಿವೈಎಸ್ಪಿ ಶಾಂತವೀರ ಆಗಮಿಸಿ ಪ್ರತಿಭಟನಾಕಾರರೊಂದಿಗೆ ಸಮಾಲೋಚನೆ ನಡೆಸಿದರು. ಸಿಬ್ಬಂದಿಗಳ ವರ್ತನೆ ಕುರಿತು ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು. ನಂತರ ಪ್ರತಿಭಟನೆ ಕೈ ಬಿಟ್ಟ ಜಯಂತಿ ಕಾರ್ಯಕ್ರಮದಲ್ಲಿ ಸಮಾಜ ಜನರು ಭಾಗಿಯಾದರು. ಪ್ರತಿಭಟನೆಯಲ್ಲಿ ಪಾಲಿಕೆ ಮಾಜಿ ಉಪ ಮಹಾಪೌರ ಸಾಜಿದ್ ಸಮೀರ್, ಕಡಗೋಳ ಆಂಜಿನೇಯ, ಶಶಿರಾಜ, ಆರ್ಯವೈಶ್ಯ ಸಮಾಜದ ಕಾರ್ಯದರ್ಶಿ ಪದ್ಮಾರಾಜ, ಬಿ.ಗೋವಿಂದ, ಜಟ್ರಂ ಶ್ರೀನಿವಾಸ, ಗಾಣಧಾಳ ಲಕ್ಷ್ಮೀಪತಿ, ಕೆ.ಜಿ.ವೀರೇಶ, ಚ್ಯಾಗಿ ವೆಂಕಟೇಶ, ಎಂ.ಆರ್.ದತ್ತಾತ್ರೇಯ ಸೇರಿದಂತೆ ಸಮಾಜ ಮಹಿಳೆಯರು, ಜನರು ಭಾಗವಹಿಸಿದ್ದರು.

## ಶಿರಪುರು ಮಾದರಿ ಚೆಕ್ ಡ್ಯಾಂಗಳ ನಿರ್ಮಾಣ

ನೀರಿನ ಮಟ್ಟ ಹೆಚ್ಚಳವಾಗಬೇಕಿದೆ. ಆದರೆ ಚೆಕ್ ಡ್ಯಾಂಗಳ ನಿರ್ಮಾಣದ ಅವಶ್ಯಕತೆ, ಗುಣಮಟ್ಟದ ಕುರಿತಂತೆ ಸಣ್ಣನೀರಾವರಿ ಇಲಾಖೆ ಗಂಬೀರವಾಗಿ ಪರಿಗಣಿಸದೇ ಇರುವದಿರಂದ ಚೆಕ್ ಡ್ಯಾಂಗಳು ಕಾಂಗ್ರೆಸ್ ಕಾರ್ಯಕರ್ತರ ಕಾಮಗಾರಿ ನಿರ್ವಹಿಸಲು ಸಹಕಾರಿಯಾಗಿವೆ ಹೊರತು ನಿರೀಕ್ಷಿತ ಫಲಿತಾಂಶ ನಿರೀಕ್ಷಿಸುವದು ಸಂಶಯಗಳಿಗೆ ಎಡೆ ಮಾಡಿದೆ. ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜ ಇವರು ಸ್ವಜಿಲ್ಲೆಯಲ್ಲಿ ಚೆಕ್ ಡ್ಯಾಂಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಇಲಾಖೆ ಗುಣಮಟ್ಟ ಖಾತ್ರಿ ಹಾಗೂ ಅವಶ್ಯಕತೆಯ ಹೊಣೆಯನ್ನು ನಿರ್ವಹಿಸಬೇಕಿದೆ.

ಸಣ್ಣ ನೀರಾವರಿ ಇಲಾಖೆಯೇ ಅಂತರ್ಜಲದ ಸಮೀಕ್ಷೆ ನಡೆಸಿದ್ದು, ರಾಯಚೂರು ಜಿಲ್ಲೆಯಲ್ಲಿ 2024-25ಸಾಲಿನಲ್ಲಿ ಸಿರವಾರ, ಸಿಂಧನೂರು ಮತ್ತು ಮಾನವಿ ತಾಲೂಕಗಳಲ್ಲಿ ಅಂತರ್ಜಲ ಮಟ್ಟ ಏರಿಕೆಯಾಗಿದೆ. ಉಳಿದಂತೆ ಇತರೆ ತಾಲೂಕಗಳಲ್ಲಿ ಅಂತರ್ಜಲ ಮಟ್ಟ ಕುಸಿತ ಕಂಡಿದೆ. ಕಳೆದ ಮೂರು ವರ್ಷಗಳಲ್ಲಿ ಅಂತರ್ಜಲ ಏರಿಳಿತ ಫಲಿತಾಂಶ ದೊರಕಿದೆ. ಕೆರೆಗಳ ಭರ್ತಿ ಮಾಡುವ ಯೋಜನೆ , ಕೆರೆಗಳ ಜೀರ್ಣೋದ್ದಾರ, ಅಟಲ್ ಭೂ ಜಲ ಯೋಜನೆ ಸೇರಿದಂತೆ ಅನೇಕಗಳಿದ್ದರೂ ಅಂತರ್ಜಲ ಮಟ್ಟದ ಏರಿಳಿತ ಅಘಾತಕಾರಿಯಾಗಿದೆ. ಸಣ್ಣ ನೀರಾವರಿ ಇಲಾಖೆ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಳ್ಳುವದು ಅಗತ್ಯವಾಗಿದೆ.

## ಸಮಾಜಮುಖಿ ಕಾರ್ಯ ಮಾದರಿ-ಭೊಸರಾಜ

ಅನ್ನದಾಸೋಹ, ಶಿಕ್ಷಣ ಸೇವೆಯನ್ನು ಮಾಡುತ್ತಿರುವ ಸೇವಾ ಸಮಿತಿ, ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಾ ಬಂದಿರುವುದು. ಮತ್ತು ತಮ್ಮ ಇಡೀ ಸೇವೆಯನ್ನು ಗ್ರಂಥದ ರೂಪದಲ್ಲಿ ಪ್ರಕಟಿಸಿ, ಇನ್ನೊಬ್ಬರಿಗೂ ಸಮಾಜ ಸೇವೆಯ ಬಗ್ಗೆ ಕಣ್ಣು ತೆರೆಸುವ ಕಾರ್ಯವನ್ನು ಮಾಡುತ್ತಿದೆ ಎಂದರು. ಗಿರಿ ಅಭಯ ಆಂಜನೇಯ್ಯ ಸಮಿತಿಯ ರೀತಿಯಲ್ಲಿ ಎಲ್ಲಾ ಸಂಘ ಸಂಸ್ಥೆಗಳು ಸಮಾಜಮುಖಿ ಕಾರ್ಯಕ್ಕೆ ಮುಂದಾದಾಗ ಮಾತ್ರ ದೇಶ, ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಮುಂದೆಯೂ ಇನ್ನೂ ಹೆಚ್ಚಿನ ಕೆಲಸ ಕಾರ್ಯಗಳನ್ನು ಸಮಿತಿ ಮಾಡಲಿ ಎಂದು ತಿಳಿಸಿದರು. ಕಾರ್ಯಕ್ರಮದ ಸಾನಿಧ್ಯವನ್ನು ಬೆಳಗಾವಿ ಜಿಲ್ಲೆಯ ಬಸವ ಬೆಳವಿಯ ಚರಮೂರ್ತಿ ಚರಂತೇಶ್ವರ ಮಠದ ಶರಣಬಸವ ದೇವರು ವಹಿಸಿಕೊಂಡಿದ್ದರು. ಈ ಸಂದರ್ಭದಲ್ಲಿ ರಾಘವೇಂದ್ರ ಕುಷ್ಟಗಿ, ಚಾಮರಸ ಮಾಲೀಪಾಟೀಲ್, ಬಿ.ಬಸವರಾಜ, ಮಹಾಂತೇಶ ಮಸ್ಕಿ, ಕೆ.ಶಾಂತಪ್ಪ, ಶ್ರೀಕಾಂತರಾವ್ ವಕೀಲ, ಹರವಿ ನಾಗನಗೌಡ, ಮಲ್ಲಿಕಾರ್ಜುನ ಮೇಟಿ, ರವೀಂದ್ರ ಜಲ್ದಾರ, ಶರಣಪ್ಪಗೌಡ ಜಾಡಲದಿನ್ನಿ, ಬೀರಪ್ಪ ಕಡದಿನ್ನಿ, ರುದ್ರಪ್ಪ ಅಂಗಡಿ, ಬಿ.ಜಿ.ಹುಲಿ, ಚನ್ನಮಲ್ಲಿಕಾರ್ಜುನ, ಮಂಡಲಗಿರಿ ಪ್ರಸನ್ನ, ದಸ್ತಗಿರಿಸಾಬ್ ದಿನ್ನಿ, ಶ್ರೀಕಾಂತರಾವ್, ಅರುಣಾ ಹಿರೇಮಠ ಸೇರಿ ಅನೇಕರಿದ್ದರು.

# ಅವಳಿ ಸುರಂಗ ಮಾರ್ಗ, ಮೇಲ್ಸೇತುವೆಗಳಿಗೆ ಬೇಕಿದೆ ಡಿಫೆನ್ಸ್ ಜಾಗ ಸಚಿವ ರಾಜನಾಥ್ ಸಿಂಗ್‌ಗೆ ಡಿ ಕೆ ಶಿವಕುಮಾರ್ ಮನವಿ



**ನವದೆಹಲಿ, ಏ.25-**ಡಿ.ಕೆ. ಶಿವಕುಮಾರ್ (ಈಓ ಖಿಜಜಿಡಿಚ್ಟ್ಮುಇಚ್ಟ) ಅವರು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಶುಕ್ರವಾರ ಭೇಟಿ ಮಾಡಿ ಬೆಂಗಳೂರಿನ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ರಕ್ಷಣಾ ಇಲಾಖೆ ಭೂಮಿಯನ್ನು ಒದಗಿಸುವಂತೆ ಹಾಗೂ ವಿಮಾನ ನಿಲ್ದಾಣಗಳ ಸುತ್ತಮುತ್ತಲ ಕಟ್ಟಡ ಎತ್ತರದ ನಿರ್ಬಂಧಗಳನ್ನು ಸಡಿಲಿಸುವಂತೆ ಮನವಿ ಸಲ್ಲಿಸಿದ್ದಾರೆ.

ನವದೆಹಲಿಯಲ್ಲಿ ನಡೆದ ಈ ಸಭೆಯಲ್ಲಿ ಬೆಂಗಳೂರು ನಗರದ ವೇಗವಾದ ಅಭಿವೃದ್ಧಿಗೆ ಕೆಲವು ರಕ್ಷಣಾ ನೀತಿಗಳು ಅಡ್ಡಿಯಾಗುತ್ತಿರುವ ಬಗ್ಗೆ ಶಿವಕುಮಾರ್ ವಿವರಿಸಿದ್ದಾರೆ. ವಿಶೇಷವಾಗಿ ಹೆಚ್ ಎಎಲ್ ವಿಮಾನ ನಿಲ್ದಾಣ ಹಾಗೂ ಯಲಹಂಕ ವಾಯುನೆಲೆ ಸುತ್ತಮುತ್ತಲ ಪ್ರದೇಶಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ನೀಡಲಾಗುತ್ತಿರುವ ನಿರಾಕ್ಷೇಪಣಾ ಪತ್ರ (ಫೆಣಾಇ) ಪ್ರಕ್ರಿಯೆಯಲ್ಲಿ ಕಠಿಣ ನಿಯಮಗಳನ್ನು ವಿಧಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ರಕ್ಷಣಾ ಇಲಾಖೆ ವಿಮಾನ ನಿಲ್ದಾಣಗಳ ಸುತ್ತಮುತ್ತಲ ಪ್ರದೇಶದಲ್ಲಿ ವಿಧಿಸಲಾಗಿರುವ ಕಟ್ಟಡಗಳ ಎತ್ತರದ ನಿರ್ಬಂಧಗಳ ಸಡಿಲಿಕೆ, ಅವಳಿ ಸುರಂಗ ಮಾರ್ಗ, ರೋಟರಿ ಮೇಲ್ಸೇತುವೆ ಸೇರಿದಂತೆ ವಿವಿಧ ಯೋಜನೆ ಜಾರಿಗೆ ರಕ್ಷಣಾ ಇಲಾಖೆ ಜಾಗಗಳನ್ನು ನೀಡುವಂತೆ ಹಾಗೂ ಸುರಕ್ಷತೆ ಹಾಗೂ ಪ್ರಗತಿಯ ವಿಚಾರವನ್ನು ಗಮನದಲ್ಲಿಟ್ಟುಕೊಂಡು ನಿರ್ಬಂಧಗಳನ್ನು ಸಡಿಲಗೊಳಿಸಿ ಸಮಸ್ಯೆಗಳಿಗೆ ಪರಿಹಾರ ನೀಡುವಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಸಂಚಾರಿ ದಟ್ಟಣೆ ನಿವಾರಣೆಗೆ ಕೈಗೊಂಡಿರುವ ವಿವಿಧ ಯೋಜನೆಗಳಿಗೆ ಅಗತ್ಯವಿರುವ ರಕ್ಷಣಾ ಇಲಾಖೆ ಜಾಗ ನೀಡುವ ಬಗ್ಗೆ ಚರ್ಚಿಸಿ ಮನವಿ ಸಲ್ಲಿಸಿದರು.ಬೆಂಗಳೂರು ಸಂಚಾರ ದಟ್ಟಣೆಗೆ ಪರಿಹಾರವಾಗಿ ರೂಪಿಸಲಾಗಿರುವ ಅವಳಿ ಸುರಂಗ ಯೋಜನೆಗೆ ಹೆಬ್ಬಾಳದ ಬಳಿ 2.039 ಎಕರೆ ಜಾಗ ಅಗತ್ಯವಿದೆ. ಬೈಯ್ಯಪ್ಪನಹಳ್ಳಿ ರೈಲ್ವೆ ಜಂಕ್ಷನ್ ಗೆ ಸಂಪರ್ಕ ಸಾಧಿಸುವ ರೋಟರಿ ಮೇಲ್ಸೇತುವೆಗೆ 1.197 ಎಕರೆ ಜಾಗ ಅಗತ್ಯವಿದೆ. ಏರ್ ಪೋರ್ಟ್ ರಸ್ತೆ (ಬಳ್ಳಾರಿ ರಸ್ತೆ) ಯಿಂದ ಸರೋವರ ಬಡಾವಣೆಗೆ ನಿರ್ಮಿಸಲು ಉದ್ದೇಶಿಸಿರುವ 60 ಅಡಿ ಸಂಪರ್ಕ ರಸ್ತೆ ಡಿಫೆನ್ಸ್ ಡೈರಿ ಫಾರ್ಮ್ ಬಳಿ ಹಾದು ಹೋಗಲಿದೆ. ಈ ಯೋಜನೆಗೆ ಬಳಕೆಯಾಗುವ ಜಾಗಕ್ಕೆ ಬದಲಿ ಜಾಗ ನೀಡಿ ಸಹಕರಿಸಬೇಕೆಂಬ ಮನವಿಗಳನ್ನು ಸಚಿವರ ಮುಂದಿಟ್ಟಿದ್ದಾರೆ.

ಲೋವರ್ ಆಗರಂ ರಸ್ತೆಯ ಸರ್ಕಾರಿ ಆಸ್ಪತ್ರೆಯಿಂದ ಸರ್ಜಾಪುರ ರಸ್ತೆ ಮಾರ್ಗವಾಗಿ ಈಜಿಪುರ ಜಂಕ್ಷನ್ ವರೆಗೂ 24 ಮೀಟರ್ ರಸ್ತೆ ನಿರ್ಮಾಣಕ್ಕೆ 13.709 ಎಕರೆ ಜಾಗದ ಅಗತ್ಯವಿದೆ. ಬೆಂಗಳೂರಿನ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಗೆ ಈ ಎಲ್ಲಾ ಜಾಗವನ್ನು ತ್ವರಿತವಾಗಿ ಹಸ್ತಾಂತರ ಮಾಡಬೇಕಾಗಿದೆ.

ಈ ಜಾಗಗಳ ಹಸ್ತಾಂತರದಿಂದ ರಕ್ಷಣಾ ಇಲಾಖೆ ಕಾರ್ಯಚರಣೆಗೆ ಯಾವುದೇ ಅಡ್ಡಿಯಾಗುವುದಿಲ್ಲ. ಹೀಗಾಗಿ ಈ ಜಾಗಗಳನ್ನು ಸಮಾನ ಮೌಲ್ಯ ಭೂಮಿ (ಉಬಿಔ) ಅಥವಾ ಸಮಾನ ಮೌಲ್ಯ ಮೂಲಸೌಕರ್ಯ (ಉಬಿಐ) ನೀತಿ ಅಡಿಯಲ್ಲಿ ಹಸ್ತಾಂತರ ಮಾಡಬೇಕು ಎಂದು ಮನವಿ ಮಾಡಲಾಗಿದೆ ಎಂದು ಶಿವಕುಮಾರ್ ಅವರು ಮಾಹಿತಿ ನೀಡಿದ್ದಾರೆ.

ರಕ್ಷಣಾ ಇಲಾಖೆಯ ಕೆಲವು ನೀತಿಗಳಿಂದ ಬೆಂಗಳೂರಿನ ಪ್ರಗತಿಗೆ ಅಡ್ಡಿಯಾಗಿದೆ. ಬೆಂಗಳೂರಿನ ರಕ್ಷಣಾ ವಿಮಾನ ನಿಲ್ದಾಣಗಳ 20 ಕಿ.ಮೀ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಚಟುವಟಿಕೆಗಳಿಗೆ ನಿರಾಕ್ಷೇಪಣಾ ಪತ್ರ (ಫೆಣಾಇ) ನೀಡುವಾಗ ವಿಮಾನ ನಿಲ್ದಾಣದ ಅಧಿಕಾರಿಗಳು ವಿಪರೀತ ನಿರ್ಬಂಧಗಳನ್ನು ವಿಧಿಸುತ್ತಿದ್ದಾರೆ. ಬೆಂಗಳೂರು ವಿಶ್ವದ ವೇಗವಾಗಿ ಬೆಳೆಯುತ್ತಿರುವ ನಗರಗಳಲ್ಲಿ ಒಂದಾಗಿದೆ.

ಹೆಚ್‌ಎಎಲ್ ವಿಮಾನ ನಿಲ್ದಾಣ ಬೆಂಗಳೂರಿನ ಹೃದಯ ಭಾಗದಲ್ಲಿದ್ದು, ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಬೇಡಿಕೆ ಇದೆ. ಆದರೆ ಹೆಚ್ಚುವರಿಯಾಗಿ ವಿಧಿಸಲಾಗಿರುವ ನಿರ್ಬಂಧಗಳು ಈ ಪ್ರದೇಶಗಳಲ್ಲಿ ಅಭಿವೃದ್ಧಿಗೆ ಅಡ್ಡಿಯಾಗಿವೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಈ ವಿಚಾರವಾಗಿ ನಾಗರಿಕ ವಿಮಾನಯಾನ ಸಚಿವಾಲಯದ ಕಾರ್ಯದರ್ಶಿಗಳು, ರಕ್ಷಣಾ ಸಚಿವಾಲಯದ ರಕ್ಷಣಾ ಉತ್ಪಾದನಾ ಇಲಾಖೆ ಕಾರ್ಯದರ್ಶಿಗಳು ಹಾಗೂ ರಕ್ಷಣಾ ಕಾರ್ಯದರ್ಶಿಗಳಿಗೆ ಪತ್ರಗಳನ್ನು ಬರೆಯಲಾಗಿದೆ. ವಿಮಾನ ಸುರಕ್ಷತೆ ಹಾಗೂ ನಗರದ ಅಭಿವೃದ್ಧಿ ಎರಡರ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಪರಿಶೀಲನೆ ನಡೆಸಿ, ಎದುರಾಗಿರುವ ಸಮಸ್ಯೆಗಳನ್ನು ಪರಿಹರಿಸಲು ಅಗತ್ಯ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಎಂದು ಡಿಸಿಎಂ ಮನವಿ ಮಾಡಿದ್ದಾರೆ.

**ಬೆಂಗಳೂರಿನ ಅಭಿವೃದ್ಧಿಗೆ ಇರುವ ನಿರ್ಬಂಧಗಳ ಕುರಿತು ವಿವರಿಸಿರುವ ಡಿಸಿಎಂ :** ಬೆಂಗಳೂರಿನಲ್ಲಿ ನಾಲ್ಕು ವಿಮಾನ ನಿಲ್ದಾಣಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳಲ್ಲಿ ಹೆಚ್ ಎಎಲ್ ಹಾಗೂ ಯಲಹಂಕ ವಾಯುನೆಲೆ ರಕ್ಷಣಾ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಈ ವಿಮಾನ ನಿಲ್ದಾಣಗಳ ಸುತ್ತಮುತ್ತಲ ಪ್ರದೇಶದಲ್ಲಿ ಕಟ್ಟಡ ನಿರ್ಮಾಣ ಮಾಡಲು ವಿಮಾನ ನಿಲ್ದಾಣ ಅಧಿಕಾರಿಗಳಿಂದ ನಿರಾಕ್ಷೇಪಣ ಪತ್ರ ಪಡೆಯಬೇಕಾಗಿದೆ.

ವಿಮಾನ ನಿಲ್ದಾಣದ ಸುತ್ತಮುತ್ತಲ 15 ಕಿ.ಮೀ ವ್ಯಾಪ್ತಿಯಲ್ಲಿ ಕಟ್ಟಡಗಳ ಎತ್ತರದ ಮಿತಿಯನ್ನು 150 ಮೀ. ನಿಗದಿಪ ಡಿಸಲಾಗಿದೆ ಎಂದು ಜಿ.ಎಸ್. ಆರ್ 751 (ಇ) ನಿಯಮದಲ್ಲಿ ಸೂಚಿಸಲಾಗಿದೆ.

ಆದರೆ ರಕ್ಷಣಾ ಇಲಾಖೆ ವಿಮಾನ ನಿಲ್ದಾಣಗಳು ಈ ವಿಪರೀತ ನಿರ್ಬಂಧ ಹೇರುವುದರ ಜತೆಗೆ 150 ಮೀ. ಎತ್ತರದ ಮಿತಿಯನ್ನು 15 ಕಿ.ಮೀ ಮೀರಿ 20 ಕಿ.ಮೀ ವರೆಗೂ ವಿಸ್ತರಿಸಿವೆ. ಈ ನಿರ್ಬಂಧಗಳು ಈ ಬೆಂಗಳೂರು ನಗರದ ಪ್ರಗತಿಗೆ ಮಾರಕವಾಗಿವೆ ಎಂದು ಡಿ ಕೆ ಶಿವಕುಮಾರ್ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

# ನಜೀರ್ ಅಹಮ್ಮದ್, ಅಬ್ದುಲ್ ಜಬ್ಬಾರ್‌ರನ್ನು ಪುನರ್ ನೇಮಿಸಿ, ಇಲ್ಲದಿದ್ದರೆ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುವುದು ಗ್ಯಾರಂಟಿ : ಮುಸ್ಲಿಂ ಧರ್ಮಗುರುಗಳ ಎಚ್ಚರಿಕೆ



**ಮಂಡ್ಯ,ಏ.25-**ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಬೆನ್ನೆಲುಬಾಗಿ ನಿಂತ ಮುಸ್ಲಿಂ ಸಮುದಾಯವನ್ನು ಈಗ ನಡು ನೀರಿನಲ್ಲಿ ಕೈಬಿಡಲಾಗುತ್ತಿದೆ ಎಂದು ಮಂಡ್ಯದ ಮುಸ್ಲಿಂ ಧರ್ಮಗುರುಗಳು ಆಕ್ರೋಶ ಹೊರಹಾಕಿದರು.

ಸಿದ್ದರಾಮಯ್ಯ ಅವರ ರಾಜಕೀಯ ಕಾರ್ಯದರ್ಶಿ ನಜೀರ್ ಅಹಮ್ಮದ್ ಮತ್ತು ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅವರ ವಜಾ ನಿರ್ಧಾರದ ವಿರುದ್ಧ ಮಂಡ್ಯದ ಜಾಮಿಯಾ ಮಸೀದಿಯಲ್ಲಿ ನಡೆದ ಜಂಟಿ ಮಾಧ್ಯಮಗೋಷ್ಟಿಯಲ್ಲಿ ಸರ್ಕಾರಕ್ಕೆ ನೇರ ಎಚ್ಚರಿಕೆ ರವಾನಿಸಿದರು.

ಈ ಕುರಿತು ಮಾತನಾಡಿದ ಮುಸ್ಲಿಂ ಧರ್ಮಗುರು ಅಬ್ದುಲ್ ಖದೀರ್ ಅವರು, ಟನಮಗೆ ಬೇರೆ ಆಯ್ಕೆಗಳಿವೆ. ಮುಸ್ಲಿಂ ಸಮುದಾಯ 90% ಮತಗಳನ್ನು ಕಾಂಗ್ರೆಸ್‌ಗೆ ಹಾಕಿದೆ. ನಾವು ಎಲ್ಲೂ ಹೋಗಲ್ಲ ಎಂಬ ಭ್ರಮೆಯಲ್ಲಿ ಕಾಂಗ್ರೆಸ್ ನಾಯಕರಿದ್ದಾರೆ. ಆದರೆ ನಮಗೆ ಬೇರೆ ಪಕ್ಷಗಳ ಆಯ್ಕೆಯೂ ಇದೆ ಎಂಬುದನ್ನು ಮರೆಯಬೇಡಿಟ ಎಂದು ಎಚ್ಚರಿಸಿದರು.

ನಿಮ್ಮನ್ನು ಹಗಲಿರುಳು ಕೆಲಸ ಮಾಡಿ ಅಧಿಕಾರದ ಕುರ್ಚಿಯ ಮೇಲೆ ಕೂರಿಸಿದವರು ನಾವು. ಅದೇ ರೀತಿ ನಮಗೆ ನಿಮ್ಮನ್ನು ಅಧಿಕಾರದಿಂದ ಕೆಳಗಿಳಿಸುವುದು ತಿಳಿದಿದೆ. ನಜೀರ್ ಅಹಮ್ಮದ್ ಅವರನ್ನು ವಜಾ ಮಾಡುವ ಮೊದಲು ಕನಿಷ್ಠ ಒಂದು ನೋಟಿಸ್ ಕೂಡ ನೀಡಿಲ್ಲ. ಸಿಎಂ ಸಿದ್ದರಾಮಯ್ಯ ಅವರಿಗೆ ಗೊತ್ತಿಲ್ಲದೆ ಹೈಕಮಾಂಡ್ ಈ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವೇ? ಎಂದು ಪ್ರಶ್ನಿಸಿದರು.

ದಾವಣಗೆರೆಯಲ್ಲಿ ಮುಸ್ಲಿಂ ನಾಯಕರನ್ನು ಟಾರ್ಗೆಟ್ ಮಾಡುತ್ತಿರುವ ವಿಚಾರದ ಕುರಿತು ಧರ್ಮಗುರುಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ಹಿಂದೆ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಶಾಮನೂರು ಶಿವಶಂಕರಪ್ಪ ಅವರು ಬಹಿರಂಗವಾಗಿ ಬಿಜೆಪಿ ಅಭ್ಯರ್ಥಿ ಪರ ಮತ ಕೇಳಿದ್ದರೂ ಅವರ ವಿರುದ್ಧ ಕ್ರಮ ತೆಗೆದುಕೊಂಡಿರಲಿಲ್ಲ. ಆದರೆ ದಾವಣಗೆರೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಒಂದು ಅವಕಾಶ ಕೇಳಿದ್ದೇ ತಪ್ಪಾಯಿತೇ? ಅಲ್ಲಿ ಶಾಮನೂರು ಕುಟುಂಬದವರೇ ಶಾಸಕ, ಸಚಿವ ಮತ್ತು ಸಂಸದರಾಗಿದ್ದಾರೆ. ಸಮರ್ಥ್ ಅವರಿಗೆ ಇನ್ನೂ ವಯಸ್ಸಿತ್ತು. ಮುಂದಿನ ಬಾರಿ ಅವಕಾಶ ನೀಡಬಹುದಿತ್ತು ಎಂದು ಅಸಮಾಧಾನ ವ್ಯಕ್ತಪಡಿಸಿದರು. ಚುನಾವಣೆ ಸಮಯದಲ್ಲಿ ನಮ್ಮನ್ನು ಬೇಕಾದಂತೆ ಬಳಸಿಕೊಳ್ಳುತ್ತೀರಿ. ಪ್ರಣಾಳಿಕೆಯಲ್ಲಿ ಭರವಸೆಗಳ ಮಹಾಪೂರವನ್ನೇ ಹರಿಸುತ್ತೀರಿ. ಆದರೆ ಅಧಿಕಾರಕ್ಕೆ ಬಂದ ಮೇಲೆ ನಮಗೆ ಒಂದು ಗ್ಲಾಸ್ ನೀರು ಕೊಡಲು ಹಿಂದೆ ಮುಂದೆ ನೋಡುತ್ತೀರಿ ಎಂದು ಕಾಂಗ್ರೆಸ್ ವಿರುದ್ಧ ಕಿಡಿಕಾರಿದರು.

ನಾವು ಬ್ಲಾಕ್‌ಮೇಲ್ ಮಾಡುತ್ತಿಲ್ಲ, ನಮ್ಮ ಹಕ್ಕನ್ನು ಕೇಳುತ್ತಿದ್ದೇವೆ. ಬಿಎಸ್‌ವೈ ಮತ್ತು ನಿರಾಣಿ ಪರವಾಗಿ ಸ್ವಾಮೀಜಿಗಳು ನಿಂತಂತೆ ನಾವು ಇಷ್ಟು ದಿನ ಮಾಡಿರಲಿಲ್ಲ. ಆದರೆ ಈಗ ನಮ್ಮ ಅಸ್ತಿತ್ವದ ಪ್ರಶ್ನೆ ಬಂದಿದೆ. ನಜೀರ್ ಅಹಮ್ಮದ್ ಮತ್ತು ಅಬ್ದುಲ್ ಜಬ್ಬಾರ್ ಅವರನ್ನು ತಕ್ಷಣ ಪುನರ್ ನೇಮಕ ಮಾಡ ಬೇಕು. ಇಲ್ಲವಾದರೆ 2028ರ ವಿಧಾನಸಭಾ ಚುನಾವಣೆಯಲ್ಲಿ ಮುಸ್ಲಿಂ ಸಮುದಾಯ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುವುದು ಗ್ಯಾರಂಟಿ ಎಂದು ಧರ್ಮಗುರುಗಳು ಎಚ್ಚರಿಕೆ ನೀಡಿದರು.

## ಬಸ್‌ನಲ್ಲಿ ಕಳೆದುಕೊಂಡ ಚಿನ್ನದ ಸರ ಪ್ರಾಮಾಣಿಕವಾಗಿ ಮರಳಿಸಿದ ಸಾರಿಗೆ ಸಿಬ್ಬಂದಿ: ಮೆಚ್ಚುಗೆ

ಬಸ್‌ನಲ್ಲಿ ಪ್ರಯಾಣಿಸಿದ್ದರು. ಬಸ್‌ನಲ್ಲಿ ಪ್ರಯಾಣಿಸುವಾ ಅರ್ಧತೊಲೆ ಬಂಗಾರ ಕಳೆದಕೊಂಡು ಆತಂಕಕ್ಕೆ ಸಿಲುಕಿದ್ದರು. ಚಾಲಕ ನರಸಿಂಹ ಮತ್ತು ನಿರ್ವಾಹಕ ಗುಡ್ ಸಾಬ್ ಎಂಬುವವರಿಗೆ ಬಂಗಾದ ಸರ ದೊರಕಿತ್ತು. ಶುಕ್ರವಾರದಂದು ಕರ್ತವ್ಯದಲ್ಲಿದ್ದಾಗ ದೊರೆತ ಚಿನ್ನದ ಸರವನ್ನು ಸದರ ಬಜಾರ ಠಾಣೆಗೆ ಒಪ್ಪಿಸಿ ಚಿನ್ನದ ಸರ ಕಳೆದುಕೊಂಡ ಮಹಿಳೆಯನ್ನು ಪತ್ತೆ ಮಾಡಿ ಮರಳಿಸಿದ್ದಾರೆ. ಸಾರಿಗೆ ಸಿಬ್ಬಂದಿಗಳ ಪ್ರಾಮಾಣಿಕತೆಯನ್ನು ಸದರ ಬಜಾರ ಪೊಲೀಸರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ವಲ್ಲಭ ಭಾಯಿ ಪಟೇಲ್ ವೃತ್ತದಲ್ಲಿ ಹೊತ್ತಿ ಉರಿದ ಟಿಸಿ ವಿದ್ಯುತ್ ಸಂಪರ್ಕವಿಲ್ಲದೇ ಪರದಾಡಿದ ಜನತೆ

ಸಂಪರ್ಕ ಕಡಿತಗೊಳಿಸಿದ್ದರಿಂದ ಸುತ್ತಮುತ್ತಲಿನ ಬಡವಾಣೆ ಜನರು ಬೇಸಿಗೆ ಬವಣೆಯಲ್ಲಿಯೂರಾತ್ರಿಯಿಡಿ ಪರಿತಪಿಸು ವಂತಾಯಿತು. ರಾತ್ರಿಯಿಡಿ ವಿದ್ಯುತ ಸಂಪರ್ಕ ಕಡಿತಗೊಂಡಿದ್ದರಿಂದ ಜನರು ಮನೆ ಹೊರಗೆ ಬಂದು ಜಾಗರಣೆ ಮಾಡುವಂತಾಯಿತು. ಯಾವುದೇ ಅನಾಹುತ ಸಂಭವಿಸಿಲ್ಲ.

## ಮಹಿಳಾ ಮೀಸಲಾತಿಗೆ ಕಾಂಗ್ರೆಸ್ ವಿರೋಧ ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ ಪ್ರತಿಭಟನೆ

ಮಹಿಳೆಯರ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷ ವಿರೋಧಿಯಾಗಿದ್ದು,. ಕೆಳವರ್ಗದ ಮಹಿಳೆಯರು ಅಭಿವೃದ್ಧಿಯಾಗಬಾರದು ಎಂಬುದೇ ಪ್ರಮುಖ ಉದ್ದೇಶವಾಗಿದೆ. ಮಹಿಳಾ ಮೀಸಲಾತಿಯ ಬಗ್ಗೆ ಕಾಂಗ್ರೆಸ್ ಪಕ್ಷದವರು ಯಾವುದೇ ಆಸಕ್ತಿ ತೋರದೆ ಮಹಿಳಾ ವಿರೋಧಿ ನಡೆ ಅನುಸರಿಸಿದ್ದಾರೆ. ಎಂದು ಕಿಡಿ ಕಾರಿದರು.

ಮಹಿಳಾ ಮೀಸಲಾತಿ ಜಾರಿ ಮಾಡಬೇಕು ಎಂಬ ಉದ್ದೇಶವನ್ನು ಬಿಜೆಪಿ ಹೊಂದಿದ್ದರೂ ಇದಕ್ಕೆ ಕಾಂಗ್ರೆಸ್ ಹಾಗೂ ಮಿತ್ರಪಕ್ಷಗಳು ಅಡ್ಡಿಪಡಿಸುತ್ತಿವೆ, ಕಾಂಗ್ರೆಸ್ ಪಕ್ಷದ ಮಹಿಳೆಯರ ವಿರೋಧಿ ಎಂದು ಸಾಬೀತಾಯಿತು. ಮುಂಬರುವ ಚುನಾವಣೆಯಲ್ಲಿ ಮಹಿಳಾ ಶಕ್ತಿ ಕಾಂಗ್ರೆಸ್ ಪಕ್ಷಕ್ಕೆ ಸರಿಯಾದ ಪಾಠ ಕಲಿಸಬೇಕು ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಮಹಿಳಾ ಮೋರ್ಚಾ ಮುಖಂಡರಾದ ಈರಮ್ಮ, ಅಕ್ಕಮ್ಮ, ಶ್ರೀದೇವಿ, ಮಾಲತಿ, ಭಾರತಿ, ಸೌಮ್ಯ, ಪುಷ್ಪ, ಗಂಗಮ್ಮ, ಶರಣಮ್ಮ, ಸಂಗೀತ, ರೂಪಾ ಶ್ರೀನಿವಾಸ ನಾಯಕ, ಶಾರದಾ ರಾಥೋಡ್, ಸುನಿತಾ ಪಾಟೀಲ, ನಿವೇದಿತಾ, ಶಿಲ್ಪಾ, ಸುಮಾ ಸೇರಿದಂತೆ ಅನೇಕ ಇದ್ದರು.

## 26ರಂದು ರಂಗಮಂದಿರದಲ್ಲಿ ಉಚಿತ ಪ್ರದರ್ಶನ-ಶ್ರೀ ಭೀಮ

ಗಳ ವೆಚ್ಚದಲ್ಲಿ ಚಲನಚಿತ್ರವನ್ನು ನಿರ್ಮಿಸಲಾಗಿದೆ. ಸಂಜೆ ನಡೆಯುವ ಕಾರ್ಯಕ್ರಮದಲ್ಲಿ ಜಿಲ್ಲೆಯ, ಸಚಿವರು, ಶಾಸಕರು, ಸಂಸದರು ಹಾಗೂ ಜಿಲ್ಲಾಧಿಕಾರಿಗಳು ಸೇರಿ ಇತರೆ ಗಣ್ಯರು ಭಾಗವಹಿ ಸಲಿದ್ದಾರೆ. ನಗರದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಚಲನಚಿತ್ರವನ್ನು ವೀಕ್ಷಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪ್ರಭು, ರಾಯಚೂರು ವೆಂಕಿ ಸೇರಿದಂತೆ ಅನೇಕರಿದ್ದರು.

## ಹೊಸ ರಾಜಕೀಯ ಪಕ್ಷ ಕಟ್ಟಿದ ಕವಿತಾ: ಟಿಆರ್‌ಎಸ್ ಎಂದು ನಾಮಕರಣ

**ಹೈದರಾಬಾದ್ (ತೆಲಂಗಾಣ),ಏ.25-**ಬಿರ್‌ಆರ್‌ಎಸ್ ಪಕ್ಷದಿಂದ ಕಳೆದ ವರ್ಷ ಉಚ್ಛಾಟನೆಯಾಗಿದ್ದ ಕೆ ಕವಿತಾ ಇದೀಗ ಹೊಸ ಪಕ್ಷ ಕಟ್ಟಿದ್ದಾರೆ. ಪಕ್ಷದಿಂದ ದೂರಾದ ಏಳು ತಿಂಗಳ ಬಳಿಕ ಇಂದು ಅವರು ತೆಲಂಗಾಣ ರಾಷ್ಟ್ರ ಸೇನಾ (ಟಿಆರ್‌ಎಸ್) ಪಕ್ಷ ಘೋಷಿಸಿದ್ದಾರೆ.

ಹೈದರಾಬಾದ್‌ನಲ್ಲಿ ಪಕ್ಷ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿರುವ ಅವರು ನಮ್ಮ ಹೊಸ ಪಕ್ಷದ ಹೆಸರು ಟಿರ್ಆಎಸ್. ರಾಜ್ಯದ ಆಕಾಂಕ್ಷೆಗಳು ಮತ್ತು ಅಪೂರ್ಣ ಕಾರ್ಯಸೂಚಿ ಪೂರೈಕೆಯನ್ನು ಗುರಿಯಾಗಿರಿಸಿಕೊಂಡು ಹೊಸ ಪ್ರಾದೇಶಿ ಪಕ್ಷವನ್ನು ಸ್ಥಾಪಿಸಲಾಗುವುದು ಎಂದು ಶುಕ್ರವಾರ ಕವಿತಾ ಘೋಷಿಸಿದ್ದರು. ನಾನು ಹಾಗೂ ತಮ್ಮ ಬೆಂಬಲಿಗರು ಪಕ್ಷವನ್ನು ಸ್ವಯಂ ಆಗಿ ತೊರೆಯಲಿಲ್ಲ, ನಮ್ಮನ್ನು ಪಕ್ಷದಿಂದ ಹೊರ ಹಾಕಲಾಗಿದೆ. ತೆಲಂಗಾಣದ ಪ್ರಾದೇಶಿಕ ಆಕಾಂಕ್ಷೆಯನ್ನು ಈಡೇರಿಸಲು ಬಿಆರ್‌ಎಸ್ ಪಕ್ಷವನ್ನು ರಚಿಸಲಾಯಿತು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L